MAA ಫ್ರೆಂಡ್ಸ್ ಸಾರಥ್ಯದಲ್ಲಿ...

# ಯುವ ಮಾರ್ಗ

ಕನ್ನಡ ದಿನಪತ್ರಿಕೆ "ಇದು ರಾಷ್ಟ್ರದ ಧ್ವನಿ"

ಸಂಪಾದಕರು : ಅನಿಲ ಕುಮಾರ್ ಹೆಚ್ Cell : 9743497111

ಪ್ರಧಾನ ಸಂಪಾದಕರು : ಮನೋಜ ಮಿಶ್ರಾ Cell : 9743496111

YUVA MARGA KANNADA DAILY NEWS PAPER

ಸಂಪುಟ: 04 | ಸಂಚಿಕೆ: 322 | ಭಾನುವಾರ : 12-10-2025 | ರಾಯಚೂರು | RNI NO: KARKAN/2022/90446 | ಪುಟ: 4 | ಬೆಲೆ: ರೂ: 2-00

VOLUME: 04 | ISSUE: 322 | SUNDAY : 12-10-2025 | RAICHUR | EMAIL: YUVAMARGA@GMAIL.COM | PAGE: 4 | PRICE: Rs: 2-00

## ಸಿಎಂ ಆಗಲು ನನಗೆ ಆತುರವಿಲ್ಲ: ಡಿಕೆಶಿ



**ಬೆಂಗಳೂರು, ಅ.11–** ನಾನು ಮುಖ್ಯಮಂತ್ರಿ ಆಗುವ ಕಾಲ ಬಂದಿದೆ ಎಂದು ಎಲ್ಲೂ ಹೇಳಿಲ್ಲ. ನನ್ನ ಹೇಳಿಕೆಯನ್ನು ತಿರುಚಿ, ವಿವಾದ ಸೃಷ್ಟಿಸಲಾಗುತ್ತಿದೆ ಅಷ್ಟೇ. ನಾನು ಮುಖ್ಯಮಂತ್ರಿ ಹುದ್ದೆ ಅಲಂಕರಿಸಲು ಆತುರದಲ್ಲಿ ಇಲ್ಲ. ನನಗೆ ನನ್ನ ಗುರಿ ಗೊತ್ತಿದೆ. ಭಗವಂತೆ ಯಾವಾಗ ಅವಕಾಶ ಕೊಡುತ್ತಾನೋ ಕೊಡಲಿ ಎಂದು ಉಪ ಮುಖ್ಯಮಂತ್ರಿ ಡಿ.ಕೆ.ಶಿವಕುಮಾರ್ ಮಾರ್ಮಿಕವಾಗಿ ಹೇಳಿದರು.

ಬೆಂಗಳೂರಿನ ಲಾಲ್‌ಬಾಗ್ ಉದ್ಯಾನವನಕ್ಕೆ ಇಂದು ಭೇಟಿ ನೀಡಿ ವಾಯು ವಿಹಾರಿಗಳ ಜತೆ 'ಬೆಂಗಳೂರು ನಡಿಗೆ' ಕಾರ್ಯಕ್ರಮದಲ್ಲಿ ಭಾಗಿಯಾಗಿ ಅವರ ದೂರು ದುಮ್ಮಾನಗಳನ್ನು ಆಲಿಸಿದ ನಂತರ ಸುದ್ದಿಗಾರರೊಂದಿಗೆ ಮಾತನಾಡಿದ ಅವರು, ನಾನು ಸಿಎಂ ಆಗುವ ಕಾಲ ಹತ್ತಿರ ಬಂದಿದೆ ಎಂದು ನಾನು ಹೇಳಿರುವುದಾಗಿ ಕೆಲ ಮಾಧ್ಯಮಗಳು ಪ್ರಸಾರ ಮಾಡುತ್ತಿವೆ. ನಾನು ಆ ರೀತಿ ಎಲ್ಲೂ ಹೇಳಿಲ್ಲ. ನನ್ನ ಹೇಳಿಕೆಯನ್ನು ತಿರುಚಲಾಗುತ್ತಿದೆ. ಸುದ್ದಿ ತಿರುಚಿ ಪ್ರಸಾರ ಮಾಡಿದರೆ ಮಾನನಷ್ಟ ಮೊಕದ್ದಮೆ ಹೂಡುವುದು ಅನಿವಾರ್ಯ ಎಂದು ಗರಂ ಆಗಿ ಹೇಳಿದರು.

ನಾನು ಇಂದು ಲಾಲ್‌ಬಾಗ್‌ಗೆ ಬಂದಾಗ ಕೆಲ ನಾಗರಿಕರು ನನ್ನನ್ನು ಭೇಟಿ ಮಾಡಿ ನೀವು ಮುಖ್ಯಮಂತ್ರಿ ಆಗಬೇಕು. ಆ ಸಮಯ ಹತ್ತಿರ ಬರುತ್ತಿದೆ ಎಂದು ಹೇಳಿದರು. ಆದರೆ ಅದನ್ನು ನಾನೇ ಹೇಳಿದೆ ಎಂಬ ಅರ್ಥದಲ್ಲಿ ತಿರುಚಿ ಮಾಧ್ಯಮಗಳು ಪ್ರಸಾರ ಮಾಡಿವೆ. ಇದು ಸರಿಯಲ್ಲ ಎಂದು ಬೇಸರ ವ್ಯಕ್ತಪಡಿಸಿದರು.

ನಾನು ಮುಖ್ಯಮಂತ್ರಿ ಹುದ್ದೆ ಅಲಂಕರಿಸಲು ಆತುರದಲ್ಲಿ ಇಲ್ಲ. ನಾನು ಇಲ್ಲಿಗೆ ಬಂದಿರುವುದು ಜನರ ಸೇವೆ ಮಾಡಲು. ರಾಜಕಾರಣ ಮಾಡಲು ಅಲ್ಲ. ಜನರ ಸೇವೆ ಮಾಡಲು ಹಗಲು–ರಾತ್ರಿ ಓಡಾಡುತ್ತಿದ್ದೇನೆ. ನೀವು ಈ ರೀತಿ ಸುಳ್ಳು ಸುದ್ದಿಗಳನ್ನು ಪ್ರಸಾರ ಮಾಡುವುದು ಸರಿಯಲ್ಲ ಎಂದು ಅವರು ಹೇಳಿದರು.

ನೀವು ಈ ರೀತಿ ಸುಳ್ಳು ಸುದ್ದಿಗಳನ್ನು ಪ್ರಸಾರ ಮಾಡಿದರೆ ನಾನು ನಿಮ್ಮನ್ನು ಯಾವುದಕ್ಕೂ ಕರೆಯುವುದಿಲ್ಲ ಎಂದ **(2ನೇಪುಟಕ್ಕೆ...)**

## ಅಧಿಕಾರ ಹಸ್ತಾಂತರ, ಸಂಪುಟ ಸರ್ಜರಿ ಸದ್ಯಕ್ಕೆ ಇಲ್ಲ : ಡಿ.ಕೆ.ಶಿವಕುಮಾರ್



**ಬೆಂಗಳೂರು, ಅ.11–** ಸದ್ಯಕ್ಕೆ ಸಚಿವ ಸಂಪುಟ ಪುನರ್ ರಚನೆ ಅಥವಾ ಅಧಿಕಾರ ಹಂಚಿಕೆಯ ಬಗ್ಗೆ ಯಾವುದೇ ಚರ್ಚೆಗಳಿಲ್ಲ. ಕೆಲವರಿಗೆ ಹೆಚ್ಚು ಆತುರವಿದೆ. ಅಂಥವರು ಅನಗತ್ಯವಾಗಿ ವದಂತಿಗಳನ್ನು ಹರಡುತ್ತಿದ್ದಾರೆ ಎಂದು ಉಪಮುಖ್ಯಮಂತ್ರಿ ಡಿ.ಕೆ.ಶಿವಕುಮಾರ್ ಆಕ್ಷೇಪಿಸಿದರು.

ಸುದ್ದಿಗಾರರೊಂದಿಗೆ ಮಾತನಾಡಿದ ಅವರು, ಗ್ರೇಟರ್ ಬೆಂಗಳೂರು, ಜಿಲ್ಲಾ ಪಂಚಾಯತ್, ತಾಲ್ಲೂಕು ಪಂಚಾಯತ್‌ಗಳ ಚುನಾವಣೆಗಳು ಹತ್ತಿರ ಬರುತ್ತಿವೆ. ಇದರ ಪೂರ್ವ ತಯಾರಿ ಕುರಿತು ಮುಖ್ಯಮಂತ್ರಿಯವರು ಸಚಿವರಿಗೆ ಸೂಚನೆಗಳನ್ನು ನೀಡಲು ಔತಣ ಕೂಟ ಆಯೋಜಿಸಿದ್ದಾರೆ. ಇದರ ಹೊರತಾಗಿ ಬೇರೆ ಏನೂ ಇಲ್ಲ ಎಂದು ಸ್ಪಷ್ಟಪಡಿದಿರು.

ಲಾಲ್‌ಬಾಗ್‌ನಲ್ಲಿ ನಾಗರಿಕರ ಜೊತೆ ಮಾತನಾಡುವಾಗ ಕೆಲವರು, ಡಿ.ಕೆ.ಶಿವಕುಮಾರ್ ಮುಖ್ಯಮಂತ್ರಿಯಾಗ ಬೇಕೆಂದು ಹೇಳಿದ್ದಾರೆ. ನಾನು ಅದಕ್ಕೆ ಯಾವುದೇ ಪ್ರತಿಕ್ರಿಯೆ ನೀಡಿಲ್ಲ. ರಾಜಕೀಯ ಮಾತನಾಡದಂತೆ ಸೂಚನೆ ನೀಡಿದ್ದೇನೆ. ಇಲ್ಲಿ ನಾನು ಜನರ ಜೊತೆ ಮಾತನಾಡುತ್ತಿರುವ ಸಂದರ್ಭದಲ್ಲೆ ನನ್ನ ಹೇಳಿಕೆಯನ್ನು ತಿರುಚಿ ತಪ್ಪಾಗಿ ಪ್ರಸಾರ ಮಾಡಲಾಗಿದೆ ಎಂದು ಆಕ್ರೋಶ ವ್ಯಕ್ತಪಡಿಸಿದರು.

ಸಿಎಂ ಆಗುವ ಕಾಲ ಹತ್ತಿರ ಬಂದಿದೆ ಎಂದು ನಾನು ಹೇಳಿಲ್ಲ, ಕೆಲವು ಮಾಧ್ಯಮಗಳು ಸುದ್ದಿ ತಿರುಚಿ ವಿವಾದ ಸೃಷ್ಟಿಸುತ್ತಿವೆ. ನಾನು ಸಾರ್ವಜನಿಕರ ಭೇಟಿಗೆ ಬಂದಾಗ ಕೆಲವರು ನೀವು ಮುಖ್ಯಮಂತ್ರಿ ಆಗಬೇಕು, ಆ ಸಮಯ ಹತ್ತಿರ ಬರುತ್ತಿದೆಯೇ ಎಂದು ಕೇಳಿದರು. ಆದರೆ ಸಿಎಂ ಆಗುವ ಕಾಲ ಹತ್ತಿರ ಬರುತ್ತಿದೆ ಎಂದು ನಾನೇ ಹೇಳಿದ್ದೇನೆ ಎಂದು ಕೆಲವು ಮಾಧ್ಯಮಗಳು ತಿರುಚಿ ಪ್ರಸಾರ ಮಾಡುತ್ತಿವೆ. ನೀವು ಹಾಗೆಲ್ಲ ಸುದ್ದಿ ತಿರುಚಿ ತೋರಿಸಬೇಡಿ ಎಂದು ಎಚ್ಚರಿಕೆ ನೀಡಿದರು.

ನಾನು ಸಿಎಂ ಹುದ್ದೆ ಅಲಂಕರಿಸಲು ಆತುರದಲ್ಲಿ ಇಲ್ಲ. ನಾನು ಇಲ್ಲಿಗೆ ಬಂದಿರುವುದು ಸಾರ್ವಜನಿಕರ ಸೇವೆ ಮಾಡಲು. ರಾಜಕಾರಣ ಮಾಡಲು ಅಲ್ಲ. ಜನರ ಸೇವೆ ಮಾಡಲು ಹಗಲು ರಾತ್ರಿ ತಿರುಗುತ್ತಿದ್ದೇನೆ. ನೀವು ಇದೇ ರೀತಿ ಸುದ್ದಿ ತಿರುಚುವುದಾದರೆ, ನಾನು ನಿಮಗೆ ಸಹಕಾರ ನೀಡುವುದಿಲ್ಲ. ಕಾರ್ಯಕ್ರಮಗಳಿಗೆ ಕರೆಯುವುದೂ ಇಲ್ಲ, ಮಾಧ್ಯಮಗೋಷ್ಠಿ ನಡೆಸುವುದೂ ಇಲ್ಲ ಎಂದು ಅಸಮಾಧಾನ ವ್ಯಕ್ತಪಡಿಸಿದರು.ನಾನು ಆ ಹೇಳಿಕೆ ಎಲ್ಲಿ ನೀಡಿದ್ದೇನೆ? ಮಾಧ್ಯಮಗಳು ರಾಜಕಾರಣ ಮಾಡುವುದು ಬೇಡ. ನಾನು ಆ ರೀತಿ ಹೇಳಿಲ್ಲ, ಅದರ ಅಗತ್ಯವೂ ನನಗೆ ಇಲ್ಲ. ನನಗೆ ನನ್ನ ಗುರಿ ಗೊತ್ತಿದೆ. ಭಗವಂತ ನನಗೆ ಅವಕಾಶ ಕೊಟ್ಟಿದ್ದಾನೆ, ಮುಖ್ಯಮಂತ್ರಿಯಾಗುವ ಅವಕಾಶ ಯಾವಾಗ ಕೊಡುತ್ತಾನೆ ಎಂಬುದು ಗೊತ್ತಿದೆ. ಇದೇ ರೀತಿ ಮಾಧ್ಯಮಗಳು ತಪ್ಪು ಮಾಹಿತಿ ನೀಡುವುದು ಮುಂದುವರೆಸಿ ದರೆ, ನನಗೆ ಮಾಧ್ಯಮಗಳನ್ನು ಬಿಟ್ಟು ರಾಜಕಾರಣ ಮಾಡುವುದು ಗೊತ್ತಿದೆ.ರಾಜ್ಯದ ಜನರ ಸೇವೆ ಹಾಗೂ ಬೆಂಗಳೂರಿನ ನಾಗರಿಕರಿಗೆ ಉತ್ತಮ ಆಡಳಿತ ನೀಡಲು ಶ್ರಮಿಸುತ್ತಿದ್ದೇನೆ. ಆದರೆ ಒಳ್ಳೆಯ ಕೆಲಸ ಬಿಟ್ಟು ವಿವಾದ ಸೃಷ್ಟಿಸಲು ಕೆಲವು ಮಾಧ್ಯಮಗಳು ಪ್ರಯತ್ನಿಸುತ್ತಿವೆ. ಇದೇ ರೀತಿ ನನ್ನ ವಿಚಾರದಲ್ಲಿ ಸುಳ್ಳು ಸುದ್ದಿ ಹಾಕಿ, ದಾರಿ ತಪ್ಪಿಸುವ ಪ್ರಯತ್ನ ಮಾಡಿದರೆ ನಾನು ಮಾನನಷ್ಟ ಮೊಕದ್ದಮೆ ಹಾಕಬೇಕಾಗುತ್ತದೆ ಎಂದು ಸಿಡಿಮಿಡಿ ವ್ಯಕ್ತಪಡಿಸಿದರು.

## ಕಾನೂನು ಪದವಿಯಲ್ಲಿ ನಿರಂತರ ಅಧ್ಯಯನ ಮಾಡಿದರೆ ಉತ್ತಮ ಸಾಧನೆ ಸಾಧ್ಯ : ಸಂಜೀವಕುಮಾರ ಕಂದಗಲ್

ಯುವ ಮಾರ್ಗ ಸುದ್ದಿ



**ಲಿಂಗಸುಗೂರು,ಅ.11–**ವಿದ್ಯಾರ್ಥಿಗಳು ಉನ್ನತ ವ್ಯಾಸಂಗಕ್ಕೆ ಬಂದ ಬಳಿಕ ಓದು–ಬರಹದ ಕಡೆಗೆ ಹೆಚ್ಚಿನಗಮನಹರಿಸಿಬೇಕು. ಅಲ್ಲದೇ ಕಾನೂನು ಪದವಿ ಪಡೆಯುವ ವಿದ್ಯಾರ್ಥಿಗಳು ನಿರಂತರ ಅಧ್ಯಯನ ಮಾಡಿದರೆ ಉತ್ತಮ ಸಾಧನೆ ಮಾಡಲು ಸಾಧ್ಯವಾಗುತ್ತದೆ ಎಂದು ಶ್ರೀಮತಿ ಬಸಮ್ಮ ಗುರುಲಿಂಗಪ್ಪ ಕಾನೂನು ಮಹಾವಿದ್ಯಾಲಯದ ಅಧ್ಯಕ್ಷ ಸಂಜೀವಕುಮಾರ ಕಂದಗಲ್ ಹೇಳಿದರು.

ಪಟ್ಟಣದ ಶ್ರೀಮತಿ ಬಸಮ್ಮ ಗುರುಲಿಂಗಪ್ಪ ಕಾನೂನು ಮಹಾವಿದ್ಯಾಲಯದಲ್ಲಿ ಪ್ರಥಮ ವರ್ಷದಕಾನೂನು ವಿದ್ಯಾರ್ಥಿಗಳ ಸ್ವಾಗತ ಸಮಾರಂಭದ ಅಧ್ಯಕ್ಷತೆ ವಹಿಸಿ ಮಾತನಾಡಿದ ಅವರು,ಕಾನೂನು ವ್ಯಾಸಾಂಗ ಪೂರ್ಣಗೊಂಡ ಬಳಿಕ ವಿದ್ಯಾರ್ಥಿಗಳು ವಕೀಲ ವೃತ್ತಿ ಮಾಡುತ್ತಿರಿ ವೃತ್ತಿಯಲ್ಲಿ ನೈಪುಣ್ಯತೆ ಹೊಂದಲು ಕಾನೂನು ಅಧ್ಯಯನ ಮಾಡುವಾಗಲೇ ಉತ್ತಮ ಅಂಶಗಳ ಬಗ್ಗೆಗಮನ ಕೇಂದ್ರಿಕರಿಸಬೇಕು ಇದರಿಂದ ವ್ಯಾಜ್ಯಗಳಲ್ಲಿ ಉಂಟಾಗುವ ಜಟಿಲತೆ ಕೂಡಲೇಪರಿಹರಿಸಲು ಸಾಧ್ಯವಾಗುತ್ತದೆ. ಕಾಲೇಜು ದಿನಗಳಲ್ಲಿ ವೃತಾ ಅಲೆಯದೇ ಅದ್ಯಯನದ ಕಡೆಹೆಚ್ಚಿನ ಗಮನ ಕೊಡಬೇಕು. ನೀವು ಉತ್ತಮ ವ್ಯಕ್ತಿಗಳಾದರೆ ನಿಮ್ಮ ಸಾಕಿ ಸಲುಹಿದತಂದೆ–ತಾಯಿಗಳು ಸಮಾಜದಲ್ಲಿ ಗೌರವ ಹೆಚ್ಚಾಗುತ್ತದೆ ಎಂದು ಕಿವಿ ಮಾತು ಹೇಳಿದರು.

ವಿದ್ಯಾರ್ಥಿಗಳು ಯಶಸ್ಸುಗಳಿಸಲು ನಿರ್ದಿಷ್ಟ ಗುರಿ, ಸಮಯದ ನಿರ್ವಹಣೆ, ಸತತ ಪ್ರಯತ್ನ ಮುಖ್ಯ. ನಾವು ಮಾಡುವ ಕೆಲಸ ಪ್ರೀತಿಸಿದರೆ ಸುಲಭವಾಗಿ ಗುರಿ ಸಾಧಿಸಬಹುದು. ಜ್ಞಾನದ ಜತೆಗೆ ಹಲವಾರು ಕೌಶಲಗಳನ್ನು ರೂಢಿಸಿಕೊಂಡರೆ ಮಾಡುವ ಕೆಲಸದಲ್ಲಿ ಗುರುತಿಸಿಕೊಳ್ಳಲು ಸಾಧ್ಯ ಎಂದರು.

ಈ ಸಂದರ್ಭದಲ್ಲಿ ಪ್ರಾಚಾರ್ಯರುಗಳಾದ ಅಮರೇಶ ಗೌಡೂರು, ಶಿವಣ್ಣ, ವೆಂಕಟೇಶ ಕವಿತಾಳ,ಉಪನ್ಯಾಸಕರಾದ ಚನ್ನಬಸವ, ಚಂದ್ರಶೇಖರ, ವೆಂಕಟೇಶ ಪೂಜಾರಿ, ಚೋಳಮ್ಮ, ಶಬ್ಬೀರ್ ಸಾಬಸೇರಿದಂತೆ ಕಾನೂನು ವ್ಯಾಸಾಂಗ ಮಾಡುವ ಪ್ರಥಮ, ದ್ವಿತಿಯ, ತೃತೀಯ ವರ್ಷದ ವಿದ್ಯಾರ್ಥಿಗಳು ಇದ್ದರು.

## ಅಂಬಿಗರ ಚೌಡಯ್ಯನವರ ಮೂರ್ತಿ ಭಗ್ನ: ಕಿಡಿಗೇಡಿಗಳ ಬಂಧನಕ್ಕೆ ಪ್ರಭುಲಿಂಗ ಮೇಗಳಮನಿ ಒತ್ತಾಯ

ಯುವ ಮಾರ್ಗ ಸುದ್ದಿ



**ಲಿಂಗಸುಗೂರು,ಅ.11–**ಕಲಬುರ್ಗಿ ಜಿಲ್ಲೆಯ ಶಹಾಬಾದ ತಾಲೂಕಿನ ಮುತ್ತಗಾ ಗ್ರಾಮದಲ್ಲಿ ನಿಜ ಶರಣ ಅಂಬಿಗರ ಚೌಡಯ್ಯನವರ ಮೂರ್ತಿಯನ್ನು ಭಗ್ನಗೊಳಿಸಿರುವ ಕಿಡಿಗೇಡಿಗಳನ್ನು ಬಂಧಿಸಬೇಕು ಹಾಗೂ ಮೂರ್ತಿಯನ್ನು ಪುನರ್ ನಿರ್ಮಾಣ ಮಾಡಲು ಗೃಹ ಸಚಿವರು ಜಿಲ್ಲಾಡಳಿತಕ್ಕೆ ಸೂಚಿಸ ಬೇಕೆಂದು ಕರ್ನಾಟಕ ರಾಜ್ಯ ದಲಿತಸಂಘರ್ಷ ಸಮಿತಿ (ನಾಗವಾರ ಬಣ) ರಾಜ್ಯ ಸಂಘಟನಾ ಸಂಚಾಲಕರಾದ ಪ್ರಭುಲಿಂಗ ಮೇಗಳಮನಿ ಪತ್ರಿಕಾ ಪ್ರಕಟಣೆಯ ಮೂಲಕ ಒತ್ತಾಯಿಸಿದರು.

12 ನೇ ಶತಮಾನದ ಶರಣರಾದ ಅಂಬಿಗರ ಚೌಡಯ್ಯನವರು ಸಾಮಾಜಿಕ ಹರಿಕಾರರು. ಅವರು ಸಮಾಜದ ಓರೆಕೋರೆಗಳನ್ನು ತಿದ್ದುವ ಮೂಲಕ ಸಮಾನತೆಯ ಸಮಾಜವನ್ನು ನಿರ್ಮಾಣ ಮಾಡುವಲ್ಲಿ ಅವಿರತವಾಗಿ ಶ್ರಮಿಸಿದವರ ಅಂತಹ ಮಹಾನ್ ಶರಣರ ಮೂರ್ತಿಯನ್ನು ಕಿಡಿಗೇಡಿ ಗಳು ಭಗ್ನಗೊಳಿಸಿ ವಿಕೃತಿ ಮೆರೆದಿದ್ದಾರೆ.ಇದನ್ನು ಯಾರು ಸಹಿಸುವು ದಿಲ್ಲ. ಇದೊಂದು ಘೋರ ಕೃತ್ಯ ಇದು ಕೋಲಿ ಸಮಾಜವಷ್ಟೇ ಅಲ್ಲ ಇಡೀ ಮಾನವ ಸಮಾಜಕ್ಕೆ ಮಾಡಿದ ಅವ'ಮಾನವಾಗಿ ದೆ.ಕಾರಣ ಇಂತಹ ವಿಕೃತ ಮನಸ್ಸಿನ ಕಿಡಿ ಗೇಡಿಗಳನ್ನು ಬಂಧಿಸಿ ಕಠಿಣ ಶಿಕ್ಷೆಗೆ ಒಳಪಡಿಸಿ, ಗಡಿಪಾರು ಮಾಡಬೇಕೆಂದು ಯಲ್ಲಪ್ಪ ಹಾಲಭಾವಿ, ಅಕ್ರಮಪಾಷಾ, ಷಣ್ಮುಖರೆಡ್ಡಿ, ಹನುಮೇಶ ಕುಪ್ಪಿಗುಡ್ಡ, ಸಂಜೀವಮೂರ್ತಿ, ಹುಸೇನಪ್ಪ ನಾಯಕ ಪ್ರಕಟಣೆಯ ಮೂಲಕ ಒತ್ತಾಯಿಸಿದರು.

## ನ.1ರಂದು ಕಸಾಪ ಜಿಲ್ಲಾಧ್ಯಕ್ಷರ ವಿರುದ್ಧ ಪ್ರತಿಭಟನೆ : ಮೇಟಿಗೌಡ



ಯುವ ಮಾರ್ಗ ಸುದ್ದಿ

**ರಾಯಚೂರು,ಅ.11–**ಜಿಲ್ಲೆಯ ಕನ್ನಡ ಸಾಹಿತ್ಯ ಪರಿಷತ್ತಿನಲ್ಲಿ ಅಧ್ಯಕ್ಷರು,ಪದಾಧಿಕಾರಿಗಳು ಯಾರು ಹಾಗೂ ರಾಜ್ಯಾಧ್ಯಕ್ಷರ ಆದೇಶ ಮತ್ತು ಜಿಲ್ಲಾಧ್ಯಕ್ಷರ ಆದೇಶಗಳ ನಡುವೆ ನಡೆಯುತ್ತಿರುವ ಗೊಂದಲ ಸುಪಡಿಸದಿದ್ದರೆ ಕನ್ನಡ ಭವನದ ಮುಂದೆ ಕನ್ನಡ ರಾಜ್ಯೋತ್ಸವದ ದಿನ ನವಂಬರ್ 01 ರಂದು ವಿನೂತನವಾಗಿ ಜಿಲ್ಲಾಧ್ಯಕ್ಷರು ನಡೆ ವಿರುದ್ಧ ಪ್ರತಿಭಟನೆ ಮಾಡಲಾಗುವುದು ಎಂದು ಬೆಳಕು ಟ್ರಸ್ಟ್ ಸಂಸ್ಥಾಪಕರಾದ ಅಣ್ಣಪ್ಪ ಮೇಟಿಗೌಡ ಎಚ್ಚರಿಕೆ ನೀಡಿದರು.

ಅವರು ಶನಿವಾರ ನಗರದ ಪತ್ರಿಕಾ ಭವನದಲ್ಲಿ ನಡೆದ ಪತ್ರಿಕಾಗೋಷ್ಠಿಯಲ್ಲಿ ಮಾತನಾಡಿ ರಾಯಚೂರು ಜಿಲ್ಲೆಯ ಕಸಾಪ ದಲ್ಲಿ ಗೊಂದಲ ನಡೆಯುತ್ತಿರುವ ವಿಚಾರವಾಗಿ ರಾಜ್ಯಾಧ್ಯಕ್ಷರಾದ ನಾಡೋಜ ಮಹೇಶ್ ಜೋಶಿ ಅವರ ಹತ್ತಿರ ಹೋಗಿ ಇಲ್ಲಿನ ಬೆಳವಣಿಗೆಗಳನ್ನು ತಿಳಿಸಿ ಗೊಂದಲ ನಿವಾರಣೆಗಾಗಿ ದೂರು ಸಲ್ಲಿಸಿ ಬಂದಿರುವೆ ಆಗ ರಾಜ್ಯಾಧ್ಯಕ್ಷರು ತಿಳಿಸಿದ ವಿಚಾರ ಕಳೆದ ಮುರುವರೇ ವರ್ಷದಿಂದ ಇದ್ದಾ ತಾಲೂಕು ಅಧ್ಯಕ್ಷರೇ ಈಗಲೂ ಅವರೇ ಅಧ್ಯಕ್ಷರು ಕಾರಣ ಅವರಿಗೆ ಆದೇಶ ನೀಡುವಾಗ ಕ ಸಾ ಪ ಬೈಲಾ ಪ್ರಕಾರ ರಾಜ್ಯಾಧ್ಯಕ್ಷರಾದ ನನ್ನ ಅನುಮೋದನೆ ಇದೆ.ಈಗ ನೂತನವಾಗಿ ಜಿಲ್ಲಾಧ್ಯಕ್ಷರ ಆದೇಶದ ಪ್ರಕಾರ,ಕಸಾಪ ಬೈಲಾ ಉಲ್ಲಂಘನೆ ಮಾಡಿ ರಾಜ್ಯಾಧ್ಯಕ್ಷರ ಅನುಮೋದನೆ ಇಲ್ಲದೆ ಜಿಲ್ಲೆಯಲ್ಲಿ ಕಸಾಪ ತಾಲೂಕು ಘಟಕಗಳನ್ನು ರಚನೆ ಮಾಡಿಕೊಳ್ಳುತ್ತಿರುವುದು ನನ್ನ ಗಮನಕ್ಕೆ ಇರಲಿಲ್ಲ ಎರಡು ಮೂರು ತಾಲೂಕಿನ ಅಧ್ಯಕ್ಷರು ನನಗೆ ದೂರು ನೀಡಿದಾಗ ನನ್ನ ಗಮನಕ್ಕೆ ಬಂತೂ ಹಾಗೆ ನಾನು ಜಿಲ್ಲಾಧ್ಯಕ್ಷರಾದ ರಂಗಣ್ಣ ಪಾಟೀಲ್ ಅವರಿಗೆ ಸೆಪ್ಟೆಂಬರ್ 22ರಂದು ಪತ್ರದ ಮೂಲಕ ನಿರ್ದೇಶನ ನೀಡಿದ್ದು ಈಗ ಹೊಸದಾಗಿ ಜಿಲ್ಲಾಧ್ಯಕ್ಷರ ಆದೇಶದ ಮೇಲೆ ಪದಗ್ರಹಣ ಜಿಲ್ಲೆಯ ಕನ್ನಡ ಸಾಹಿತ್ಯ ಪರಿಷತ್ತಿನಲ್ಲಿ ಅಧ್ಯಕ್ಷರು,ಪದಾಧಿಕಾರಿಗಳು ಯಾರು ಹಾಗೂ ರಾಜ್ಯಾಧ್ಯಕ್ಷರ ಆದೇಶ ಮತ್ತು ಜಿಲ್ಲಾಧ್ಯಕ್ಷರ ಆದೇಶಗಳ ನಡುವೆ ನಡೆಯುತ್ತಿರುವ ಗೊಂದಲ ಸುಪಡಿಸದಿದ್ದರೆ ಕನ್ನಡ ಭವನದ ಮುಂದೆ ಕನ್ನಡ ರಾಜ್ಯೋತ್ಸವದ ದಿನ ನವಂಬರ್ 01 ರಂದು ವಿನೂತನವಾಗಿ ಜಿಲ್ಲಾಧ್ಯಕ್ಷರು ನಡೆ ವಿರುದ್ಧ ಪ್ರತಿಭಟನೆ ಮಾಡಲಾಗುವುದು ಎಂದು ಬೆಳಕು ಟ್ರಸ್ಟ್ ಸಂಸ್ಥಾಪಕರಾದ ಅಣ್ಣಪ್ಪ ಮೇಟಿಗೌಡ ಎಚ್ಚರಿಕೆ ನೀಡಿದರು.

ಹಾಗಾಗಿ ಜಿಲ್ಲೆಯ ಕಸಾಪ ಆಜೀವ ಸದಸ್ಯರೇ ಹಾಗೂ ಕನ್ನಡದ ಪ್ರೇಮಿಗಳೇ ಯಾವುದೇ ಗೊಂದಲಕ್ಕೆ ಒಳಗಾಬೇಡಿ ಈಗ ಪದಗ್ರಹಣ ಮಾಡಿದ ಹಾಗೂ ಪದಗ್ರಹಣ ಮಾಡುತ್ತಿರುವ ಕಸಾಪ ಪದಾಧಿಕಾರಿಗಳಿಗೆ ಯಾವುದೇ ಮಾನ್ಯತೆ ಇರುವುದಿಲ್ಲ ಇದು ಖುದ್ದು ಜಿಲ್ಲಾಧ್ಯಕ್ಷರಾದ ರಂಗಣ್ಣ ಪಾಟೀಲ್**(2ನೇಪುಟಕ್ಕೆ)**

## ಕಾಲೇಜು ಮಕ್ಕಳ ಭವಿಷ್ಯ ರೂಪಿಸುವ ವೇದಿಕೆಯಾಗಲಿ : ಜಿಶಾನ್ ಅಖಿಲ್ ಸಿದ್ಧಿಖಿ

ಯುವ ಮಾರ್ಗ ಸುದ್ದಿ



**ಮಾನ್ವಿ,ಅ.11–**ವಿದ್ಯಾರ್ಥಿಗಳಿಗೆ ಕೇವಲ ವಿದ್ಯಾಭ್ಯಾಸ ಕೊಡುವುದಷ್ಟೆ ಕೆಲಸವಾಗದೇ ಭವಿಷ್ಯ ರೂಪಿಸುವ ವೇದಿಕೆಗಳಾಗಬೇಕು. ಸರ್ವಾಂಗಿಣ ಅಭಿವೃದ್ಧಿ ಜ್ಞಾನ, ಅನುಭವ, ಕೌಶಲ್ಯಭರಿತವಾದ ಶಿಕ್ಷಣ ಪಡೆದುಕೊಳ್ಳಬೇಕು ಸಂಸ್ಥೆಗಳು ಸಹಾ ಈ ನಿಟ್ಟಿನಲ್ಲಿ ಶ್ರಮಿಸಬೇಕು ಒಟ್ಟಾರೆಯಾಗಿ ನಮ್ಮ ಮುಖ್ಯ ಗುರಿಯನ್ನು ತಲುಪುವ ನಿಟ್ಟಿನಲ್ಲಿ ಸಾಗಲಿ ಎಂದು ಆದಿಕವಿ ಶ್ರೀ ಮಹರ್ಷಿ ವಾಲ್ಮೀಕಿ ವಿಶ್ವವಿದ್ಯಾಲಯ ಸಿಂಡಿಕೇಟ್ ಸದಸ್ಯ ಜೀಶಾನ್ ಅಖಿಲ್ ಸಿದ್ಧಿಖಿ ಹೇಳಿದರು.

ಪಟ್ಟಣದ ಚೌಡೇಶ್ವರಿ ಕಲ್ಯಾಣ ಮಂಟಪದಲ್ಲಿ ಆದಿಕವಿ ಶ್ರೀ ಮಹರ್ಷಿ ವಾಲ್ಮೀಕಿ ವಿಶ್ವವಿದ್ಯಾಲಯ ರಾಯಚೂರು ಮತ್ತು ಶ್ರೀ ವೆಂಕಟೇಶ್ವರ ಪದವಿ ಮಹಾವಿದ್ಯಾಲಯದ ವತಿಯಿಂದ ಬಿ.ಎ. ಪ್ರಥಮ ವರ್ಷದ ವಿದ್ಯಾರ್ಥಿಗಳಿಗೆ ಸ್ವಾಗತ ಸಮಾರಂಭ ಜರುಗಿತು.

ಕಾರ್ಯಕ್ರಮದಲ್ಲಿ ಮುಖ್ಯ ಅತಿಥಿಯಾಗಿ ಆರ್ ಸತೀಶ್ ಗೌಡ ಕಾಂಗ್ರೇಸ ಯುವ ಮುಖಂಡರು ಮಾತನಾಡುತ್ತಾ "ಮಕ್ಕಳಲ್ಲಿ ಉದಗಿರುವ ಪ್ರತಿಭೆಯನ್ನು ಹೊರಹಾಕುವ ಅವಕಾಶ ಮಾಡಿಕೊಡುವ ಆಡಳಿತ ಮಂಡಳಿಯಲ್ಲಿದ್ದುಕೊಂಡು ಉಪನ್ಯಾಸ ಮಾಡುತ್ತಿರುವವರನ್ನು ನೋಡಿದರೆ ಉಜ್ವಲ ಭವಿಷ್ಯ ನಿಮ್ಮದಾಗುತ್ತದೆ ಎಂಬ ಎಲ್ಲಾ ಲಕ್ಷಣಗಳಿವೆ ಎಂದು ಹೇಳಿದರು.

ಕಾರ್ಯಕ್ರಮದ ವೇದಿಕೆಯಲ್ಲಿ ಕಾರ್ಯಕ್ರಮದ ಅಧ್ಯಕ್ಷತೆ ಆಂಜನೇಯ ನಸಲಾಪುರ, ಶ್ರೀವೆಂಕಟೇಶ್ವರ ಶಿಕ್ಷಣ ಸಂಸ್ಥೆಯ ಸಂಸ್ಥಾಪಕ ಮಹಾಂತೇಶ ಓಲೇಕಾರ, ನಮ್ಮ ಮಾನ್ವಿ ಕಾಲೇಜು ಅಧ್ಯಕ್ಷ ಎಚ್ ಮೌನೇಶ ಗೌಡ, ಸರ್ಕಾರಿ ಬಾಲಕೀಯರ ಪದವಿ ಪೂರ್ವ ಕಾಲೇಜು ಪ್ರಾಚಾರ್ಯ ನಾಗ ಮಲ್ಲೇಶ್, ಮಾಜಿ ಯೋಧ ಆಂಜನೇಯ ಜೆಲ್ಲಿ, ಪ್ರಾಚಾರ್ಯ ಶಂಕರಪ್ಪ ಅಂಗಡಿ, ಉಪಾಧ್ಯಕ್ಷ ಮಹಿಬೂಬ್ ಮದ್ಲಾಪುರ, ಕಾರ್ಯದರ್ಶಿ ಡಾ. ಹುಲಿಯಪ್ಪ ದುಮತಿ, ಖಜಾಂಚಿ ಚಂದ್ರಶೇಖರ ಎಚ್, ಮಲ್ಲಪ್ಪ ನೆಲಕೋಳ,ಉಪನ್ಯಾಸಕರಾದ ಶೈಲಾಜಾ, ಆಫ್ರೀನ್ ಬೇಗಂ, ಅಂಬಣ್ಣ ನಾಯಕ ಉಮಳಿ ಹೊಸೂರು, ರೇಣುಕಾ, ಆಫೀಯ ಅಂಜುಮ್, ಸಂತೋಷ ಮತ್ತು ವಿದ್ಯಾರ್ಥಿಗಳು ಉಪಸ್ಥಿತರಿದ್ದರು.

ಎಸ್‌ವಿಡಿ ಕ್ರಿಕೆಟ್ ಕಪ್ ಚಾಂಪಿಯನ್ ರಾಕರ್ಸ್, ರನ್ನರಫ್ ಇಂಡಿಯನ್ ಸ್ಟ್ರೈಕರ್ ತಂಡ, ಥ್ರೋಬಾಲ್ ಪ್ರಥಮ ದುರ್ಗಮ್ಮ ತಂಡ, ದ್ವಿತೀಯ ಯಲ್ಲಮ್ಮ ತಂಡ ಪಾರಿತೋಷಕ ಮತ್ತು ಪದಕಗಳನ್ನು ವಿತರಿಸಲಾಯಿತು.ಮಲ್ಲಿಕಾರ್ಜುನ ನಿರೂಪಿಸಿದರು ರೇಣುಕಾ ಬಲ್ಲಟಗಿ ಸ್ವಾಗತಿಸಿದರು. ಸುಧಾ ವಂದಿಸಿದರು

## ಮೊದಲನೇಯ ಪುಟದಿಂದ

# ಸಿಎಂ ಆಗಲು ನನಗೆ ಆತುರವಿಲ್ಲ: ಡಿಕೆಶಿ

ಉಪಮುಖ್ಯಮಂತ್ರಿ ಡಿ.ಕೆ. ಶಿವಕುಮಾರ್, ನಾನು ಸಿಎಂ ಆಗುವ ಕಾಲ ಹತ್ತಿರ ಬಂದಿದೆ ಎಂದು ಎಲ್ಲಿ ಹೇಳಿದ್ದೇನೆ ತೋರಿಸಿ ಮಾಧ್ಯಮಗಳು ರಾಜಕಾರಣ ಮಾಡುವುದು ಬೇಡ ಎಂದರು.

ನಾನು ಆ ರೀತಿ ಹೇಳಿಲ್ಲ. ಅದರ ಅಗತ್ಯವೂ ಇಲ್ಲ. ನನಗೆ ನನ್ನ ಗುರಿ ಗೊತ್ತಿದೆ. ಭಗವಂತ ನನಗೆ ಯಾವಾಗ ಅವಕಾಶ ಕೊಡುತ್ತಾನೋ ಕೊಡಲಿ. ರಾಜ್ಯದ ಜನರ ಸೇವೆ ಹಾಗೂ ಬೆಂಗಳೂರಿನ ನಾಗರಿಕರಿಗೆ ಉತ್ತಮ ಆಡಳಿತ ನೀಡುವುದು ನನ್ನ ಆದ್ಯತೆ, ಬದ್ಧತೆ. ಆ ನಿಟ್ಟಿನಲ್ಲಿ ಕೆಲಸ ಮಾಡುತ್ತಿದ್ದೇನೆ. ಆದರೆ ಅಭಿವೃದ್ಧಿ ಕೆಲಸ ಬಿಟ್ಟು ವಿವಾದ ಸೃಷ್ಟಿಸಲು ಕೆಲ ಮಾಧ್ಯಮಗಳು ಪ್ರಯತ್ನಿಸುತ್ತಿವೆ ಎಂದು ಅಸಮದಾನ ಹೊರ ಹಾಕಿದರು.

ಇದೇ ರೀತಿ ನನ್ನ ವಿಚಾರದಲ್ಲಿ ಸುಳ್ಳು ಸುದ್ದಿ ಪ್ರಸಾರ ಮಾಡಿ ದಾರಿ ತಪ್ಪಿಸುವ ಪ್ರಯತ್ನ ಮಾಡಿದರೆ ನಾನು ಮಾನನಷ್ಟ ಮೊಕ್ಕದಮ್ಮೆ ಹಾಕ ಬೇಕಾಗುತ್ತದೆ ಎಂದು ಉಪಮುಖ್ಯಮಂತ್ರಿಗಳು ಗರಂ ಆಗಿ ಹೇಳಿದರು.

# ನ.1ರಂದು ಕಸಾಪ ಜಿಲ್ಲಾಧ್ಯಕ್ಷರ ವಿರುದ್ಧ ಪ್ರತಿಭಟನೆ : ಮೇಟಿಗೌಡ

ಅವರಿಗೂ ಗೊತ್ತಿದ್ದೂ ಈ ರೀತಿ ಗೊಂದಲ ಸೃಷ್ಟಿ ಮಾಡುತ್ತಿರುವುದು ಸರಿಯಲ್ಲ ಇದು ಕನ್ನಡ ಕೆಲಸ ಮಾಡುವವರಿಗೆ ಗೌರವ ಸಲ್ಲುವುದಿಲ್ಲವೆಂದು ಮೇಟಿಗೌಡ ತಿಳಿಸಿದರು. ಒಳ್ಳೆಯ ರೀತಿಯಲ್ಲಿ ಕನ್ನಡ ಕಾರ್ಯಗಳು ಸಾಗಲಿ ಇನ್ನೊಂದ್ ವರ್ಷ ತಮ್ಮ ಅಧಿಕಾರವಿದೆ ಇನ್ನೊಂದ್ ಜಿಲ್ಲೆಯಲ್ಲಿ ಜಿಲ್ಲಾಸಮ್ಮೇಳನ ಆಗಲಿ, ಹಿಂದೆ ನಿಮ್ಮ ಜೊತೆಗಿದ್ದಂತೆ ಈಗಲೂ ಇರುತ್ತೇವೆ, ತಾಲೂಕುಗಳಲ್ಲಿ ತಾಲೂಕು ಸಮ್ಮೇಳನಗಳು ಆಗಲಿ ದತ್ತಿ ಕಾರ್ಯಕ್ರಮ ನಡೆಯಲಿ, ಅದಕ್ಕೆ ಏನು ಕೇಂದ್ರ ಕಸಾಪದಿಂದ ಹಣ ಬರುತ್ತೆ ಅದು ನೀಡಲು ರಾಜ್ಯಾಧ್ಯಕ್ಷರು ಸಿದ್ದರಿದ್ದಾರೆ ನಾವು ಹಿಂದೆ ಇದ್ದಂತೆ ನಿಮ್ಮ ಒಳ್ಳೆ ಕಾರ್ಯಗಳ ಜೊತೆಗೆ ಇರುತ್ತೇವೆ. ಈಗ ಹೊಸದಾಗಿ ಬಂದವರು ಏನು ಕಾರ್ಯಕ್ರಮ ಮಾಡಿದ್ರು, ಅದು ಕಸಾಪ ವ್ಯಾಪ್ತಿಯಲ್ಲಿ ಬರುವುದಿಲ್ಲ ರಾಜ್ಯ ಸಮಿತಿಯಿಂದ ಯಾವುದೇ ಹಣ ಬರುವುದಿಲ್ಲವೆಂದು ರಾಜ್ಯಾಧ್ಯಕ್ಷರು ಸ್ಪಷ್ಟವಾಗಿ ತಿಳಿಸಿದ್ದಾರೆ, ಈ ರೀತಿ ಗೊಂದಲ ಬೇಡ ಜಿಲ್ಲಾಧ್ಯಕ್ಷರೇ ಮೊದಲು ರಾಜ್ಯಾಧ್ಯಕ್ಷರ ಬಳಿ ಚರ್ಚೆ ಮಾಡಿ ಈ ಎಲ್ಲಾ ಗೊಂದಲಗಳಿಗೆ

ಅಂತ್ಯಹಾಡಿ ಇನೋದ್ ಎರಡು ದಿನಾ ಕಳೆದರೆ ನ್ಯಾಯಾಲಯದ ಮೆಟ್ಟಿಲಿನವರಿಗೂ ಹಾಗೂ ನಿಮ್ಮ ಜಿಲ್ಲೆಯ ಕಸಾಪ ಹೆಸರು ಹೋಗುತ್ತೆ. ನಿಮ್ಮ ಅಧಿಕಾರವದಿಯಲ್ಲಿ ರೀತಿ ಕಪ್ಪು ಚುಕ್ಕಿ ಬೇಡ.. ಅದು ಹೋಗುವುದು ಬೇಡವೆಂದರೆ ಮೊದಲು ಎಲ್ಲರ ಬಳಿ ಚರ್ಚೆ ಮಾಡಿ ರಾಜ್ಯಾಧ್ಯಕ್ಷರ ಹತ್ತಿರ ಮಾತಾಡಿ ತೀರ್ಮಾನ ಮಾಡಿ ಎನ್ನುವುದು ನನ್ನ ವಿನಂತಿ. ನಾನು ರಾಜ್ಯಾಧ್ಯಕ್ಷರ ಹತ್ತಿರ ಜಿಲ್ಲಾಧ್ಯಕ್ಷರ ನಿಷ್ಕ್ರಿಯತೆ, ಯಾವುದೇ ಸಮ್ಮೇಳನಗಳನ್ನು ಮಾಡುತ್ತಿಲ್ಲ ಎನ್ನುವುದರ ಬಗ್ಗೆ ಕೂಡ ಚರ್ಚೆ ಮಾಡಲಾಗಿದ್ದು, ಕಸಾಪ ಬೈಲಾದಲ್ಲಿ ಅವರ ಬದಲಿಗೆ ಹಂಗಾಮಿ ಅಧ್ಯಕ್ಷರನ್ನು ನೇಮಿಸಲು ಬರುವುದಿಲ್ಲವೆಂದು ತಿಳಿಸಿದ್ದಾರೆ. ಈಗ ತಾಲೂಕುಗಳಲ್ಲಿ ಪದಗ್ರಹಣ ಮಾಡುತ್ತಿರುವ ಹಾಗೂ ಪದಗ್ರಹಣ ಮಾಡಿದ ಹೊಸ ಪದಾಧಿಕಾರಿಗಳು ಕಸಾಪ ಬೈಲಾದ ನಿಯಮ 32/3ಪ್ರಕಾರ ಅನುಮೋದನೆ ಇಲ್ಲದೆ ಇದ್ರೆ ಮಾನ್ಯತೆ ಇಲ್ಲಾ ಎಂದು ನಿಮಗೆ ತಿಳಿದರೂ ಕೂಡ ಹೊಸ ಪದಾಧಿಕಾರಿಗಳನ್ನು ಹಾಗೂ ಹಳೆಯ ಪದಾಧಿಕಾರಿಗಳಿಗೆ ಮುಜುಗರ ಉಂಟುಮಾಡುವ

ಕೆಲಸ ಯಾಕೆ ನೀವೂ ಮಾಡಿದ್ದು? ಕ ಸಾ ಪ ಜಿಲ್ಲಾಧ್ಯಕ್ಷರೇ ಕನ್ನಡದ ಮೇಲೆ ನಿಮಗೆ ಅಭಿಮಾನವಿದ್ದರೆ ಕೆಲಸ ಮಾಡದೆ ಕೈಲಾಗದಿದ್ದರೆ ರಾಜೀನಾಮೆ ನೀಡಿ ಅಥವಾ ಪ್ರಧಾನ ಕಾರ್ಯದರ್ಶಿಗಳು ಹಾಗೂ ಪದಾಧಿಕಾರಿಗಳ ಜೊತೆಗೆ ಕೆಲಸ ಮಾಡಿಕೊಂಡು ಹೋಗಿ ಇಲ್ಲವಾದರೆ ಕನ್ನಡ ಭವನ ಮುಂದೆ ಪ್ರತಿಭಟನೆ ಮಾಡಲಾಗುವುದು ಎಂದು ಅಣ್ಣಪ್ಪ ಮೇಟಗೌಡ ತಿಳಿಸಿದರು. ಈ ಪತ್ರಿಕಾಗೋಷ್ಠಿಯ ಸಂಧರ್ಭದಲ್ಲಿ ಕಲಾ ಸಂಕುಲ ಸಂಸ್ಥೆಯ ಸಂಸ್ಥಾಪಕರಾದ ಮಾರುತಿ ಬಡಿಗೇರ್ ಉಪಸ್ಥಿತರಿದ್ದರು

# ಪರಿಸರ ಮುನಿದರೆ ಎಲ್ಲರಿಗೂ ಸಂಕಟನಾವೆಲ್ಲ ಜಾಗೃತರಾಗಬೇಕು: ಈಶ್ವರ ಖಂಡ್ರೆ



**ಬಳ್ಳಾರಿ, ಅ.11–** ಪರಿಸರ ವಿನಾಸದಿಂದಾಗಿ ರೋಗ ರುಜಿನ ಬರುತ್ತವೆ, ಪ್ರವಾಹ ಬರುತ್ತದೆ, ಪ್ರಕೃತಿ ವಿಕೋಪ ಆಗುತ್ತದೆ ಅದಕ್ಕಾಗಿ ನಾವು ಪರಿಸರ ಸಂರಕ್ಷಣೆಗೆ ಬದ್ಧರಾಗಿರಬೇಕು ಎಂದು ಅರಣ್ಯ, ಪರಿಸರ ಸಚಿವ ಈಶ್ವರ ಖಂಡ್ರೆ ಹೇಳಿದರು.

ಅವರು ಇಂದು ನಗರದ ಮುನಿಷಿಪಲ್ ಹೈಸ್ಕೂಲ್ ಮೈದಾನದಲ್ಲಿ ಹಮ್ಮಿಕೊಂಡಿದ್ದ ಕರ್ನಾಟಕ ರಾಜ್ಯ ಮಾಲಿನ್ಯ ನಿಯಂತ್ರಣ ಮಂಡಳಿಯ "ಸುವರ್ಣ ಮಹೋತ್ಸವ" ಉದ್ಘಾಟನೆ ಮಾಡಿ ಮಾತನಾಡುತ್ತಿದ್ದರು. ಇಂದಿರಾ ಗಾಂಧಿಯವರ ದೂರದರ್ಶತ್ವದ ಫಲದಿಂದ ಪ್ರಕೃತಿ ಉಳಿಬೇಕು ಪರಿಸರ ಉಳಿಬೇಕು. ಎಂದು 1972 ವನ್ಯ ಜೀವಿ ಸಂರಕ್ಷಣಾ ಕಾಯ್ದೆ ಮಾಡಿದ್ರು. 1974 ರಲ್ಲಿ ಮಾಲಿನ್ಯ ನಿಯಂತ್ರಣ ಮಂಡಳಿ ರಚನೆ ಮಾಡಿದ್ರು.1980 ರಲ್ಲಿ ಅರಣ್ಯ ಸಂರಕ್ಷಣಾ ಕಾಯ್ದೆ ಬಂತು ಇವುಗಳ ಪರಿಣಾಮ ಇನ್ನೂ ಪರಿಸರ ಉಳಿದಿದೆಂದರು.

ಜಲ ಮೂಲಗಳು ತ್ಯಾಜ್ಯಗಳಿಂದ ತುಂಬಿವೆ. ಅವನ್ನು ಪರೀಕ್ಷೆ ಮಾಡಿ ಶುದ್ದೀಕರಿಸುವ ಕಾರ್ಯ ಸರ್ಕಾರದಿಂದ ನಡೆಯುತ್ತಿದೆ. ಜನರೂ ಸಹ ಮಾಲಿನ್ಯ ಆಗದಂತೆ ನೋಡಿಕೊಳ್ಳಬೇಕಿದೆ. ಪ್ಲಾಸ್ಟಿಕ್ ಬಳಕೆ ಬಿಡಬೇಕು, ಬಟ್ಟೆ ಚೀಲ ಬಳಸಲು ಸಂಕಲ್ಪ ಮಾಡಬೇಕು.

ಕಳೆದ ಎರೆಡು ವರ್ಷದಲ್ಲಿ 6 ಕೋಟಿ ಸಸಿ ನೆಟ್ಟಿದೆ

ಅರಣ್ಯ ಒತ್ತುವರಿ ತೆರವು ಮಾಡುತ್ತಿದೆ. ಗಣಿಗಾರಿಕೆಯಿಂದ ಉಂಟಾಗುವ ಧೂಳನ್ನು ಬಳ್ಳಾರಿ ಜಿಲ್ಲೆಯಲ್ಲಿ ನಿಯಂತ್ರಣಕ್ಕೆ ಸೂಚಿಸಿದೆಂದರು.

ಪರಿಸರ ಮಾಲಿನ್ಯ ನಿಯಂತ್ರಣ ಮಂಡಳಿ ಅಧ್ಯಕ್ಷ ನರೇಂದ್ರಸ್ವಾಮಿ ಪ್ರಾಸ್ತಾವಿಕವಾಗಿ ಮಾತನಾಡಿ, ಪರಿಸರ ಮಾಲಿನ್ಯ ನಿಯಂತ್ರಣ ಮಂಡಳಿಯನ್ನು ದಿವಂಗತ ಪ್ರಧಾನಿ ಇಂದಿರಾಗಾಂಧಿ ಅವರು ಸ್ಥಾಪನೆ ಮಾಡಿದ್ದರು ಎಂದು ತಿಳಿಸಿ, ಬಳ್ಳಾರಿ ಜಿಲ್ಲೆಯಲ್ಲಿನ 52 ಕಾರ್ಖಾನೆಗಳ ಮೇಲೆ ನಿಗಾ ವಹಿಸಿದೆ. 2.4 ಲಕ್ಷ ಸಸಿಗಳನ್ನು ನಾಟಿ ಮಾಡಿದೆ. ಪರಿಸರ ಸಂರಕ್ಷಣೆಗೆ ಎಲ್ಲಾ ರೀತಿಯ ಕ್ರಮ ತೆಗೆದುಕೊಂಡಿದೆಂದು ತಿಳಿಸಿದರು.

ಮಂಡಳಿಯಿಂದ ವರ್ಷವಿಡೀ ಜಿಲ್ಲೆಯಾಧ್ಯಂತ ಪರಿಸರದ ಜಾಗೃತಿ ಮೂಡಿಸುವ ಕಾರ್ಯ ಮಾಡಲಿದೆ. ಪರಿಸರ ಸಂರಕ್ಷಣೆಯಲ್ಲಿ ತೊಡಗಿರುವವರಿಗೆ "ಇಂದಿರಾ ಪ್ರಿಯದರ್ಶಿನಿ ಪರಿಸರ ಪ್ರಶಸ್ತಿ ನೀಡಿ ಗೌರವಿಸುತ್ತಿದೆಂದು ಹೇಳಿ. ಬರುವ ದೀಪಾವಳಿ ಹಬ್ಬದ ಸಂದರ್ಭದಲ್ಲಿ ಪರಿಸರ ಸ್ನೇಹಿ ಪಟಾಕಿಯನ್ನು ಮಾತ್ರ ಬಳಸಲು ಮನವಿ ಮಾಡಿದರು .ಬೈಟ್

ಸಂಸದ ಇ.ತುಕರಾಂ ಮಾತನಾಡಿ, ನಮ್ಮ ಅಖಂಡ ಬಳ್ಳಾರಿ ಜಿಲ್ಲೆಯಲ್ಲಿ ಅರಣ್ಯ, ಖನಿಜ, ಜಲ ಸಂಪತ್ತು ಇದೆ. ಜೊತೆಗೆ ಔದ್ಯಮಿಕವಾಗಿಯೂ ಕೂಡಿದೆ. ಜಿಲ್ಲೆಯಲ್ಲಿ ಅವೈಜ್ಞಾನಿಕವಾಗಿ ಗಣಿಗಾರಿಕೆ ನಡೆಯುತ್ತಿದೆ. ಇದಕ್ಕಾಗಿ ಪರಿಸರದ ವೈಜ್ಞಾನಿಕ ಸಮೀಕ್ಷೆ ಆಗಬೇಕು , ಈ ಭಾಗದಲ್ಲಿ ಕಿಡ್ನಿ ಸಮಸ್ಯೆ, ಕ್ಯಾನ್ಸರ್ ಸಮಸ್ಯೆ ಇದೆ. ತುಂಗಭದ್ರ ನದಿಯ ಮಾಲಿನ್ಯ ತಡೆಯಬೇಕೆಂದರು.

ಪರಿಸರ ಸಂರಕ್ಷಣೆಗೆ ಶ್ರಮಿಸುತ್ತಿರುವ ಸಂಡೂರಿನ ಶ್ರೀಶೈಲ ಆಲದಹಳ್ಳಿ, ಡಾ.ಜಿ.ಮನೋಹರ್, ಅಮರೇಶಗೌಡ, ಸಲಾವುದ್ದೀನ್ ಮೊದಲಾದವರಿಗೆ ಇಂದಿರಾ ಪ್ರಿಯದರ್ಶಿನಿ ಪರಿಸರ ಪ್ರಶಸ್ತಿ ನೀಡಿ ಸಚಿವ ಖಂಡ್ರೆ ಗೌರವಿಸಿದರು.

ಸಮಾರಂಭದಲ್ಲಿ ಗ್ಯಾರೆಂಟಿ ಯೋಜನೆಗಳ ಅನುಷ್ಟಾನ ಸಮಿತಿಯ ಜಿಲ್ಲಾ ಉಪಾಧ್ಯಕ್ಷ ಸಂಗನಕಲ್ಲು ವಿಜಯಕುಮಾರ್ ಸಂವಿಧಾನದ ಪೀಠಿಕೆಯನ್ನು ಬೋಧಿಸಿದರು.


ಈ ವೇಳೆ ಪರಿಸರ ಮಾಲಿನ್ಯ ಮಂಡಳಿಯನ್ನು 1974 ರಲ್ಲಿ ಸ್ಥಾಪಿಸಿದ ದಿ.ಪ್ರಧಾನಿ ಇಂದಿರಾಗಾಂಧಿ ಅವರ ಬಗ್ಗೆ ಹಾಗು ಪರಿಸರ ಸಂರಕ್ಷಣೆ ಕುರಿತು ಸಾಕ್ಷಾಚಿತ್ರ ಪ್ರದರ್ಶಿಸಲಾಯ್ತು.

ಡಿಸಿಎಫ್ ಡಾ. ಬಸವರಾಜ್ ಕೆ.ಎನ್. ಸ್ವಾಗತಿಸಿದರು.

ಡಿ.ಕಗ್ಗಲ್ಲು ದೊಡ್ಡವಸವ ಗವಾಯಿಗಳ ತಂಡದಿಂದ ಗೀತಗಾಯನ ನಡೆಯಿತು.

ಸಮಾರಂಭದಲ್ಲಿ ಶಾಸಕಿ ಇ.ಅನ್ನಪೂರ್ಣ, ಮೇಯರ್ ಮುಲ್ಲಂಗಿ ನಂದೀಶ್, ಡಿಸಿ ನಾಗೇಂದ್ರ ಪ್ರಸಾದ್ ಕೆ., ಎಸ್ಪಿ ಡಾ.ಶೋಭಾರಾಣಿ, ಸಿಇಓ ಮಹಮ್ಮದ್ ಹಾರೀಸ್ ಸುಮೇರ್, ಪಾಲ್ಗೊಂಡಿದ್ದರು ಕೆ ಆಯುಕ್ತ ಪಿ.ಸಿ.ಮಂಜುಮಾಥ, ಎಸಿ ಪ್ರಮೋದ್, ಡಿಸಿಸಿ ಅಧ್ಯಕ್ಷ ಅಲ್ಲಂ ಪ್ರಶಾಂತ್, ಚೇಂಬರ್ ಆಫ್ ಕಾಮರ್ಸ್ ಅಧ್ಯಕ್ಷ ಯಶವಂತರಾಜ್ ಮೊದಲಾದವರು ಇದ್ದರು.

# ಕಲೆ, ಸಾಹಿತ್ಯ, ಸಂಗೀತದಿಂದ ಸಾಂಸ್ಕೃತಿಕ ಶ್ರೀಮಂತಿಕೆ ಹೆಚ್ಚಳ



**ಕಲಬುರಗಿ, ಅ.11–**ಯಾವುದೇ ದೇಶದ ಶ್ರೀಮಂತಿಕೆ ನೋಡಬೇಕಾದರೆ ಕೇವಲ ಆರ್ಥಿಕ ಶ್ರೀಮಂತಿಕೆ ಬಿಟ್ಟು ಅಲ್ಲಿಯ ಕಲೆ, ಸಾಹಿತ್ಯ, ಸಂಗೀತ ಮತ್ತು ಇತಿಹಾಸಗಳು ಮುಖ್ಯ. ಸೃಜನಶೀಲ ಭಾವನೆಗಳನ್ನು ಕಲೆ, ಸಾಹಿತ್ಯ, ಸಂಗೀತಗಳ ಮೂಲಕ ಅಭಿವ್ಯಕ್ತಪಡಿಸಬಹುದು. ಇದರಿಂದ ಎಲ್ಲಾ ಸಮುದಾಯಗಳನ್ನು ಒಂದುಗೂಡಿಸುವ ಮತ್ತು ಸಂಸ್ಕೃತಿ ಸಂಸ್ಕಾರ ಇನ್ನಷ್ಟು ಶ್ರೀಮಂತಯನ್ನಾಗಿಸಲು ಸಾಧ್ಯ. ಇದನ್ನು ಮುಂದಿನ ಜನಾಂಗಕ್ಕೆ ತಲುಪಿಸುವಲ್ಲಿ ಕನ್ನಡ ಸಾಹಿತ್ಯ ಪರಿಷತ್ತು ನಿರಂತರವಾಗಿ ಶ್ರಮಿಸುತ್ತಿದೆ ಎಂದು ಕರ್ನಾಟಕ ಕೇಂದ್ರೀಯ ವಿಶ್ವವಿದ್ಯಾಲಯದ ಕುಲಸಚಿವ ಡಾ. ಆರ್. ಆರ್. ಬಿರಾದಾರ ಹೇಳಿದರು.

ಜಿಲ್ಲಾ ಕಸಾಪ ಅಧ್ಯಕ್ಷ ವಿಜಯಕುಮಾರ ಪಾಟೀಲ ತೇಗಲತಿಪ್ಪಿ ಹಾಗು ಕಲಾವಿದ ಡಾ. ರೆಹಮಾನ್ ಪಟೇಲ್ ಅವರ ಸಂಪಾದಕತ್ವದ ಈ ಭಾಗದ ಚಿತ್ರಕಲಾವಿದರ ಪರಿಚಯಾತ್ಮಕ ದೃಶ್ಯಕಲಾ ಸಿರಿ ಕೃತಿಯನ್ನು ಜನಾರ್ಪಣೆಗೊಳಿಸಿ ಅವರು ಮಾತನಾಡಿದರು.

ಸಾಹಿತ್ಯ, ಸಂಸ್ಕೃತಿ ಪರಂಪರೆ ಮುಂದಿನ ಪೀಳಿಗೆಗೆ ಅರಿವು ಅಗತ್ಯ:ಕಾರ್ಯಕ್ರಮ ಉದ್ಘಾಟಿಸಿ ಮಾತನಾಡಿದ ಕರ್ನಾಟಕ ಮಾಹಿತಿ ಆಯೋಗದ ಆಯುಕ್ತರಾದ ಬದ್ರುದ್ದೀನ್ ಕೆ., ಈ ನಾಡಿನ ಕಲೆ, ಸಾಹಿತ್ಯ, ಸಂಸ್ಕೃತಿ ಮತ್ತು ಇತಿಹಾಸ ಪರಂಪರೆಗಳನ್ನು ನಮ್ಮ ಮುಂದಿನ ಪೀಳಿಗೆಗೆ ಅರಿವು ಮೂಡಿಸುವ ಅಗತ್ಯವಾಗಿದೆ. ಶರಣರು, ಸಂತರು ಮತ್ತು ಸೂಫಿ ಸಂತರ ನಾಡಿನಲ್ಲಿ ಸಾಮರಸ್ಯ, ಸಂತೃಪ್ತಿ ಜೀವನ ಕಂಡು ನನಗೆ ಖುಷಿಯಾಗಿದೆ. ಈ ನೆಲದ ಕಲಾವಿದರು ಕನಸುಗಾರರಿದ್ದಂತೆ. ಬದುಕಿನ ವಿವಿಧ ಆಯಾಮಗಳ ಕುರಿತು ಕಲೆಯ ಮೂಲಕ ಅನಾವರಣಗೊಳಿಸುವ ಶಕ್ತಿ ಕಲಾವಿದರಲ್ಲಿದೆ. ಬರುವ ದಿನಗಳಲ್ಲಿ ಅನ್ನದ ಭಾಷೆಯನ್ನು ಪ್ರೀತಿಸಿ ಅನುಷ್ಠಾನಗೊಳಿಸಬೇಕು. ನಮ್ಮ ಮಾಹಿತಿ ಆಯೋಗ ದಿಂದ ಕನ್ನಡದಲ್ಲಿಯೇ ತೀರ್ಪು ನೀಡುತ್ತಿದ್ದೇವೆ. ಮಾತೃ ಭಾಷೆ ನಿರಂತರವಾಗಿ ಅಳವಡಿಸಿಕೊಂಡು ಬೆಳೆಸಬೇಕಾಗಿದೆ ಎಂದರು.

ಅಧ್ಯಕ್ಷತೆ ವಹಿಸಿದ್ದ ಜಿಲ್ಲಾ ಕಸಾಪ ಅಧ್ಯಕ್ಷ ವಿಜಯಕುಮಾರ ಪಾಟೀಲ ತೇಗಲತಿಪ್ಪಿ, ಇಂದಿನ ಹೊಸ ಪೀಳಿಗೆಯನ್ನು ಸಾಹಿತ್ಯದತ್ತ ಆಕರ್ಷಿತರಾಗುವಂತೆ ಪ್ರೇರಣೆ ಕೊಡುವ ಕಾರ್ಯಕ್ರಮಗಳು ಜಿಲ್ಲೆಯಲ್ಲಿ ಪರಿಷತ್ತು ಮಾಡುತ್ತಿದೆ. ಪ್ರತಿಯೊಬ್ಬರಲ್ಲೂ ಅಭೂತಪೂರ್ವವಾದ ಪ್ರತಿಭೆ ಇದ್ದೇ ಇರುತ್ತದೆ. ಅದನ್ನು ಗುರುತಿಸಿ ಬೆಳೆಸುವಲ್ಲಿ ಸಮಾಜದ ಪ್ರತಿಯೊಬ್ಬ ಪ್ರಜ್ಞಾವಂತ ನಾಗರಿಕನ ಮೇಲಿದೆ. ಕನ್ನಡ ಭವನದ ಕಲಾ ಸೌಧದಲ್ಲಿ ಕಲಾವಿದರ ಪರಿಚಯದ ಜತೆಗೆ ಅವರ ಚಿತ್ರಗಳೂ ಸಹ ಸಾಮಾಜಿಕ ಪರಿವರ್ತನೆಯ ಮೇಲೆ ಮಾತನಾಡುತ್ತಿವೆ ಎಂದರು. ಪರಿಷತ್ ನಿಂದ ಜಿಲ್ಲೆಯಲ್ಲಿ ದಾಖಲೀಕರಣ ಆಗುವ ಅನೇಕ ಮಹತ್ವದ ಮತ್ತು ಮೌಲಿಕ ಕೃತಿಗಳನ್ನು ಹೊರ ತರಲಾಗುತ್ತಿದೆ ಎಂದರು.

ಕರ್ನಾಟಕ ಲಲಿತಕಲಾ ಅಕಾಡೆಮಿ ಮಾಜಿ ಅಧ್ಯಕ್ಷ ನಾಡೋಜ ಡಾ. ಜೆ.ಎಸ್. ಖಂಡೇರಾವ, ಗ್ಯಾರಂಟಿ ಯೋಜನೆಗಳ ಅನುಷ್ಠಾನ ಪ್ರಾಧಿಕಾರದ ಜಿಲ್ಲಾಧ್ಯಕ್ಷೆ ಚಂದ್ರಿಕಾ ಪರಮೇಶ್ವರ, ಕೃತಿ ಸಂಪಾದಕ ಡಾ. ರೆಹಮಾನ್ ಪಟೇಲ್, ಕೇಂದ್ರ ಕಸಾಪ ಪ್ರತಿನಿಧಿ ಸೈಯ್ಯದ್ ನಜಿರುದ್ದಿನ್ ಮುತ್ತವಲ್ಲಿ, ಜಿಲ್ಲಾ ಕಸಾಪ ದ ಶಿವರಾಜ ಅಂಡಗಿ, ಧರ್ಮಣ್ಣ ಎಚ್ ಧನ್ನಿ, ಶರಣರಾಜ ಛಪ್ಪರಬಂದಿ, ರವೀಂದ್ರಕುಮಾರ ಭಂಟನಳ್ಳಿ, ರಾಜೇಂದ್ರ ಮಾಡಬೂಳ ವೇದಿಕೆ ಮೇಲಿದ್ದರು. ವಿಶ್ವಖ್ಯಾತಿಯ ಚಿತ್ರಕಲಾವಿದ ಮಹ್ಮದ್ ಅಯಾಜೋದ್ದೀನ್ ಪಟೇಲ್ ಕೃತಿ ಪರಿಚಯಿಸಿದರು.

ಪ್ರಮುಖರಾದ ಡಾ. ಬಿ.ಎ. ಪಾಟೀಲ, ಸಿದ್ಧಲಿಂಗ ಬಾಳಿ, ಅಮೃತಪ್ಪ ಅಣೂರ, ಬಾಬುರಾವ ಪಾಟೀಲ, ರಾಘವೇಂದ್ರ ಬುರ್ಲಿ, ಶೇಖರ ಬ್ಯಾಕೋಡ, ಬಸವರಾಜ ತೋಟದ್, ಡಾ. ಎ.ಎಸ್. ಪಾಟೀಲ, ಡಾ. ಶಿವನಂದ ಭಂಟನೂರ ಸೇರಿದಂತೆ ಅನೇಕರು ಉಪಸ್ಥಿತರಿದ್ದರು.


# ನಿಜಶರಣ ಅಂಬಿಗರ ಚೌಡಯ್ಯ ಪ್ರತಿಮೆ ವಿರೂಪ: ಆರೋಪಿಗಳಿಗೆ ಕಾನೂನು ಪ್ರಕಾರ ಶಿಕ್ಷೆ



**ಕಲಬುರಗಿ,ಅ.11–**ಚಿತ್ತಾಪುರ ಮತಕ್ಷೇತ್ರದ ಮುತ್ತಗಾ ಗ್ರಾಮದಲ್ಲಿ ನಿಜಶರಣ ಅಂಬಿಗರ ಚೌಡಯ್ಯ ಪ್ರತಿಮೆಯನ್ನು ದುಷ್ಕರ್ಮಿಗಳು ವಿರೂಪಗೊಳಿಸಿರುವ ಹೇಯ ಕೃತ್ಯ ಖಂಡನಿಯ. ಈ ಕೃತ್ಯದಲ್ಲಿ ಯಾರೇ ಭಾಗಿಯಾಗಿದ್ದರೂ ಅವರಿಗೆ ಕಾನೂನು ಅಡಿಯಲ್ಲಿ ಕಠಿಣ ಶಿಕ್ಷೆಯಾಗಲಿದೆ. ಘಟನೆ ಕುರಿತು ಈಗಾಗಲೇ ಸಂಬಂಧಪಟ್ಟ ಅಧಿಕಾರಿಗಳೊಂದಿಗೆ ಮಾತನಾಡಿದ್ದು, ಆರೋಪಿಗಳನ್ನು ಶೀಘ್ರವೇ ಪತ್ತೆಹಚ್ಚಿ ಬಂಧಿಸುವಂತೆ ಪೊಲೀಸರಿಗೆ ಸೂಚಿಸಲಾಗಿದೆ ಎಂದು ಗ್ರಾಮೀಣಾಭಿವೃದ್ಧಿ ಹಾಗೂ ಪಂಚಾಯತ್ ರಾಜ್ ಮತ್ತು ಕಲಬುರಗಿ ಜಿಲ್ಲಾ ಉಸ್ತುವಾರಿ ಸಚಿವ ಪ್ರಿಯಾಂಕ್ ಖರ್ಗೆ ತಿಳಿಸಿದ್ದಾರೆ.

ಅಂಬಿಗರ ಚೌಡಯ್ಯನವರು 12ನೇ ಶತಮಾ ನದಲ್ಲಿ ವಚನ ಕ್ರಾಂತಿಯಲ್ಲಿ ಸಕ್ರಿಯವಾಗಿ ತೊಡಗಿಸಿಕೊಂಡು ಸಾಮಾಜಿಕ ಪ್ರಜ್ಞೆಯನ್ನು ಜಾಗೃತಗೊಳಿಸಿದ ಬಸವಣ್ಣನವರ ಅನುಯಾ ಯಿ ಶರಣ. ಸಾವಿರಾರು ವರ್ಷಗಳಿಂದ ಜನ ಸಮೂಹದಲ್ಲಿದ್ದ ಮೂಢನಂಬಿಕೆಗಳ ವಿರುದ್ಧ ಅರಿವು ಮೂಡಿಸಿದ ಮಹಾ ಜ್ಞಾನಿ. ಸಮಾಜದಲ್ಲಿನ ಮೌಢ್ಯದ ಅಂಧಕಾರವನ್ನು ಅಳಿಸಿ, ಚಿಂತನೆಯ ಬೆಳಕು ಹೊತ್ತಿಸುವಲ್ಲಿ ಅಂಬಿಗರ ಚೌಡಯ್ಯ ಅವರ ಪಾತ್ರ ಹಿರಿದು. ಅವರ ವಚನಗಳು ನಮ್ಮಲ್ಲಿ ವಿಚಾರವಂತಿಕೆ ಮೂಡಿಸುತ್ತದೆ. ಆದರೆ ವಿಕೃತ ಮನಸ್ಥಿತಿಯ ಕೆಲವರು ಮಹಾನ್ ವಚನಕಾರರ ಪ್ರತಿಮೆಯನ್ನು ವಿರೂಪಗೊ ಳಿಸಿರುವುದು ನಮ್ಮ ಭವ್ಯ ಪರಂಪರೆಗೆ ಮಾಡಿರುವ ಅಪಮಾನ. ಇದನ್ನು ಸರ್ಕಾರ ಸಹಿಸುವುದಿಲ್ಲ ಎಂದು ಅವರು ತಮ್ಮ ಟ್ವೀಟರ್‌ನಲ್ಲಿ ತಿಳಿಸಿದ್ದಾರೆ.

# ಸರ್ವಜ್ಞ ಮತ್ತು ಜಸ್ಟಿಸ್ ಶಿವರಾಜ ಪಾಟೀಲ ಕಾಲೇಜಿನಲ್ಲಿ ವಿಶ್ವ ಮಾನಸಿಕ ಆರೋಗ್ಯ ದಿನಾಚರಣೆ




**ಕಲಬುರಗಿ,ಅ.11–** ನಗರದ ಸರ್ವಜ್ಞ ಮತ್ತು ಜಸ್ಟಿಸ್ ಶಿವರಾಜ ಪಾಟೀಲ ಸ್ವತಂತ್ರ ಪದವಿ ಪೂರ್ವ ವಿಜ್ಞಾನ ಮಹಾವಿದ್ಯಾ ಲಯದಲ್ಲಿ ವಿಶ್ವ ಮಾನಸಿಕ ಆರೋಗ್ಯ ದಿನಾಚರಣೆ ಕಾರ್ಯಕ್ರಮ ಆಯೋಜಿಸಲಾಯಿತು.ಕಾರ್ಯಕ್ರಮ ಉದ್ಘಾಟಿಸಿದ ಮನೋವಿ ಜ್ಞಾನಿ ಡಾ. ದಿಲೀಪ್ ಕುಮಾರ ಅವರು ಮಾತನಾಡುತ್ತ, ವ್ಯಕ್ತಿಯ ಮನಸ್ಸು ಎಲ್ಲದಕ್ಕೂ ಕಾರಣ. ಆ ಮನಸ್ಸನ್ನು ಸಮಾಜದಲ್ಲಿನ ಕೆಟ್ಟದ್ದನ್ನು ತೊಡೆದುಹಾಕುವ ನಿಟ್ಟಿನಲ್ಲಿ ತೊಡಗಿಸಿಕೊಂಡು ಮಾನಸಿಕ ಆರೋಗ್ಯ ಸ್ವಸ್ಥವಾಗಿರಿಸಿಕೊಂಡು, ಸುತ್ತಲಿನ ಸಮಾ ಜದ ಸ್ವಾಸ್ಥವನ್ನು ಕಾಪಾಡಬೇಕು. ಮಾನಸಿಕ ಅಸ್ವಸ್ಥತೆಯ ಕಾರಣಗಳನ್ನು ಕಂಡು ಹಿಡಿದು ಅದಕ್ಕೆ ಪರಿಹಾರ ಕಂಡುಕೊಳ್ಳ ಬೇಕು. ಇಡೀ ವಿಶ್ವ ಮಾನಸಿಕವಾಗಿ ಆರೋಗ್ಯದಿಂದಿರಬೇಕು ಎಂದರು. ಜನರ ಜೀವನದ ಮೇಲೆ ಮನಸ್ಸಿನ ಮಹತ್ವ ಅದರ ಪರಿಣಾಮಗಳರಿತು ಉತ್ತಮ ಸಮಾಜ ನಿರ್ಮಿಸಲು ಬೆಳಕು ಚೆಲ್ಲಲು ಸಾಧ್ಯವಾಗುತ್ತದೆ.

ಪ್ರತಿಯೊಬ್ಬ ವಿದ್ಯಾರ್ಥಿಯಲ್ಲಿಯೂ ಪ್ರತಿಭೆ, ಕೌಶಲ್ಯ, ಶಕ್ತಿ, ಸಾಮರ್ಥ್ಯವಿರುತ್ತದೆ. ಅದನ್ನು ಸರಿಯಾದ ಕೆಲಸಕ್ಕೆ ನಿರಂತರ ಸದುಪಯೋಗಪಡಿಸಿಕೊಂಡಾಗ ಪ್ರತಿಭೆ ಹೊರ ಬರುತ್ತದೆ. ನನ್ನಿಂದ ಸಾಧ್ಯವಿಲ್ಲ ಎಂಬ ಕೀಳರಿಮೆ ಬಿಟ್ಟು, ಗುಣ–ಅವಗುಣವನ್ನು ಅರಿತು ಕಷ್ಟದ ವಿಷಯಗಳನ್ನು ಇಷ್ಟಪಟ್ಟು ನಿರಂತರವಾಗಿ ಓದಬೇಕು. ಇಲ್ಲದಿದ್ದರೆ ನಿಮ್ಮ ಪ್ರತಿಭೆ ವ್ಯರ್ಥವಾಗುತ್ತದೆ ಎಂದರು.ಸಂಸ್ಥೆಯ ಸಂಸ್ಥಾಪಕ ಪ್ರೊ. ಚನ್ನಾರಡ್ಡಿ ಪಾಟೀಲ ಅವರು ಅಧ್ಯಕ್ಷೀಯ ನುಡಿಗಳನ್ನಾಡುತ್ತ ಮಕ್ಕಳು ತಮ್ಮ ಮನಸ್ಸನ್ನು ಸ್ವಸ್ಥವಾಗಿರಿಕೊಂಡು ಶ್ರದ್ಧೆ, ಆಸಕ್ತಿ, ನಿರಂತರ ಪ್ರಯತ್ನದಿಂದ ಓದಿ ಸಾದನೆ ಮಾಡಿ ಸಮಾಜದ ಸ್ವಾಸ್ಥ ಕಾಪಾಡುವದು ತಮ್ಮ ಕರ್ತವ್ಯವೆಂದರಿಯಬೇಕು. ಮನಸ್ಸಿದ್ದಲ್ಲಿ ಮಾರ್ಗವಿರುತ್ತದೆ. ಉತ್ತಮ ವಿಚಾರಗಳನ್ನು, ಆಲೋಚನೆಗಳನ್ನು ಹೊಂದಿದ್ದು, ಮನಸ್ಸನ್ನು ಅಧ್ಯಯನದಲ್ಲಿ ತೊಡಗಿಸಿ ಶ್ರೇಷ್ಠ ಸಾಧಕರಾಗಿ ಹೊರಹೊಮ್ಮಬೇಕೆಂದು ಪ್ರೇರೇಪಿಸಿದರು.

## ಹಾಸನಾಂಬೆ ದರ್ಶನಕ್ಕೆ ಹರಿಬಂದ ಭಕ್ತಸಾಗರ, ಮೊದಲ ದಿನವೇ 50 ಲಕ್ಷ ಕಾಣಿಕೆ ಸಂಗ್ರಹ



**ಹಾಸನ, ಅ.11–** ಹಾಸನಾಂಬೆದೇವಿಯ ಸಾರ್ವಜನಿಕ ದರ್ಶನದ 2ನೇ ದಿನವಾದ ಇಂದು ಸಹ ಜನಸಾಗರವೇ ಹರಿದುಬಂದಿತ್ತು. ಮುಂಜಾನೆ 4 ಗಂಟೆಯಿಂದಲೇ ಭಕ್ತರು ಸರತಿಸಾಲಿನಲ್ಲಿ ನಿಂತು ದೇವಿಯ ದರ್ಶನ ಪಡೆದರು. ವಿಐಪಿ, ವಿವಿಐಪಿ ಪಾಸ್‌ಗಳು ಇಲ್ಲದಿರುವುದರಿಂದ ಬೋರ್ಡ್ ಪಾಸ್ ಹಾಗೂ ಶಿಷ್ಟಾಚಾರಕ್ಕೆ ಸಮಯ ನಿಗದಿ ಮಾಡಿರುವ ಹಿನ್ನಲೆಯಲ್ಲಿ ಶೀಘ್ರವಾಗಿ ಭಕ್ತರು ದೇವಿಯ ದರ್ಶನ ಪಡೆಯುತ್ತಿದ್ದಾರೆ.

ಭಕ್ತರಿಗೆ ಯಾವುದೇ ತೊಂದರೆಯಾಗದಂತೆ ಜಿಲ್ಲಾ ಉಸ್ತುವಾರಿ ಸಚಿವರಾದ ಕೃಷ್ಣಭೈರೇಗೌಡ ಅವರು ಸ್ಥಳದಲ್ಲೆ ಮೊಕ್ಕಾಂ ಹೂಡಿ ಪರಿಸ್ಥಿತಿಯನ್ನು ಅವಲೋಕಿಸುತ್ತಿದ್ದಾರೆ. ಜೊತೆಗೆ ಸಾರ್ವಜನಿಕರಿಗೆ ಯಾವುದೇ ತೊಂದರೆಯಾಗದಂತೆ ಅಧಿಕಾರಿಗಳು ಹಾಗೂ ಸಿಬ್ಬಂದಿಗಳು ಕ್ರಮ ವಹಿಸುವಂತೆ ಸೂಚನೆ ನೀಡಿದ್ದಾರೆ.

ಮಳೆಯಲ್ಲೂ ಸಹ ದೇವಾಲಯದ ಬಳಿಯೇ ನಿಂತು ವ್ಯವಸ್ಥೆಯನ್ನು ಪರಿಶೀಲಿಸಿದ್ದಾರೆ. ಯಾವುದೇ ರೀತಿಯ ತೊಂದರೆಯಾಗದಂತೆ ಭಕ್ತರಿಗೆ ದೇವಿಯ ದರ್ಶನಕ್ಕೆ ಅನುವು ಮಾಡಿಕೊಟ್ಟಿದ್ದಾರೆ.ಇಂದು ಶನಿವಾರ ನಾಳೆ ಭಾನುವಾರ ಆಗಿದ್ದರಿಂದ ಹೆಚ್ಚು ಜನರು ನಿರೀಕ್ಷೆಗೂ ಮೀರಿ ದೇವಾಲಯಕ್ಕೆ ಬರುವು ದರಿಂದ ಎಲ್ಲಿಯೂ ಕೂಡ ಸಣ್ಣ ಲೋಪವಾ ಗದಂತೆ ಎಚ್ಚರಿಕೆ ವಹಿಸುವಂತೆ ಸೂಚನೆ ನೀಡಿದ್ದಾರೆ.

**ಮೊದಲ ದಿನವೇ 50 ಲಕ್ಷ ಸಂಗ್ರಹ**

ನಗರದ ಅಧಿದೇವತೆ ಹಾಸನಾಂಬೆ ದೇವಿಯ ದರ್ಶನಕ್ಕೆ ಜನಸಾಗರವೇ ಹರಿದುಬರುತ್ತಿದ್ದು, ಒಂದೇ ದಿನ 50 ಲಕ್ಷ ರೂ. ಸಂಗ್ರಹವಾಗಿದೆ. ವರ್ಷಕ್ಕೊಮ್ಮೆ ದರ್ಶನ ನೀಡುವ ದೇವಿಯನ್ನು ಕಣ್ತುಂಬಿಕೊಳ್ಳಲು ರಾಜ್ಯ ಹಾಗೂ ಹೊರರಾಜ್ಯಗಳಿಂದಲೂ ಭಕ್ತರು ಮಳೆ, ಗಾಳಿ, ಚಳಿಯನ್ನು ಲೆಕ್ಕಿಸದೆ ಬರುತ್ತಿದ್ದು, ಸಾರ್ವಜನಿಕ ದರ್ಶನದ ಮೊದಲ ದಿನವೇ ಟಿಕೆಟ್ ಹಾಗೂ ಲಾಡು ಮಾರಾಟದಿಂದ 50 ಲಕ್ಷ ಸಂಗ್ರಹವಾಗಿದೆ.300 ರೂ. ಟಿಕೆಟ್‌ನಲ್ಲಿ ಆನ್‌ಲೈನ್‌ನಲ್ಲಿ 1241, ಕೌಂಟರ್‌ನಲ್ಲಿ 5783 ರೂ. ಸೇರಿ ಒಟ್ಟು 7,024 ರೂ. ಟಿಕೆಟ್‌ಗಳು ಮಾರಾಟವಾಗಿ ಒಟ್ಟು 21,07,200 ರೂ. ಸಂಗ್ರಹವಾಗಿದೆ.

1000 ರೂ. ಟಿಕೆಟ್‌ನಲ್ಲಿ 1278 ಆನ್‌ಲೈನ್, ಕೌಂಟರ್‌ಗಳಲ್ಲಿ 2778 ಸೇರಿ 4,056 ಟಿಕೆಟ್‌ಗಳು ಮಾರಾಟದಿಂದ 40,56,000 ರೂ. ಸಂಗ್ರಹವಾಗಿದೆ.

2468 ಲಡ್ಡು ಪ್ರಸಾದ ಮಾರಾಟವಾಗಿದ್ದು, 2,46,800 ರೂ. ಸಂಗ್ರಹವಾಗಿದೆ. ಮೊದಲ ದಿನವೇ ದೊಡ್ಡ ಮಟ್ಟದಲ್ಲಿ ಟಿಕೆಟ್ ಹಾಗೂ ಪ್ರಸಾದ ಮಾರಾಟದಿಂದ ಆದಾಯ ಬಂದಿದ್ದರೆ, ಇನ್ನು ಹುಂಡಿಯಲ್ಲಿ ಹೆಚ್ಚು ಹಣ ಕಾಣಿಕೆ ರೂಪದಲ್ಲಿ ಸಂಗ್ರಹವಾಗಿದೆ.

# ಪ್ರೊಫೆಸರ್ ಮನೆಯಲ್ಲಿ 1.50 ಕೋಟಿ ದೋಚಿದ್ದ ಖದೀಮರ ಬಂಧನ

**ಬೆಂಗಳೂರು,ಅ.11–**ಸರ್ಕಾರಿ ಅಧಿಕಾರಿಗಳ ಸೋಗಿನಲ್ಲಿ ಸಿಂಧಿ ಕಾಲೇಜು ಪ್ರೊಫೆಸರ್ ಗಿರಿರಾಜ್ ಕುಮಾರ್ ಅವರ ಮನೆಯಲ್ಲಿದ್ದ ಪತ್ನಿ ತಾಯಿಯನ್ನು ಬೆದರಿಸಿ 1.50 ಕೋಟಿ ನಗದು,50 ಗ್ರಾಂ ಚಿನ್ನ ದೋಚಿದ್ದ ಚಾಲಕ ಸೇರಿ 7 ಮಂದಿಯನ್ನು ಯಲಹಂಕ ಪೊಲೀಸರು ಬಂಧಿಸುವಲ್ಲಿ ಯಶಸ್ವಿಯಾಗಿದ್ದಾರೆ.

ಆರ್ ಎಂವಿ ಎರಡನೇ ಹಂತದ ರಾಜೇಂದ್ರ ಮುನೋಟ್ ಅಲಿಯಾಸ್ ರಾಜೇಂದ್ರ ಜೈನ್(42) ಹೈದರಾಬಾದ್ ನ ರಾಮನಗರ ಮುಖ್ಯರಸ್ತೆಯ ಮೋಹನ್ ಗೌಡ ಅಲಿಯಾಸ್ ಜನಾರ್ದನ್(54) ವಿಜಯನಗರದ ಚೋಳರಪಾಳ್ಯದ ಶ್ರೀನಿವಾಸನ್ ಅಲಿಯಾಸ್ ಸೀನು(44) ಶ್ರೀನಗರದ ಕಿರಣ್ ಕುವಾರ್ ಜೈನ್ (51)ಶ್ರೀರಾಂಪುರದ ಹೇಮಂತ್ ಕುವಾರ್ ಜೈನ್(42)ದೊಮ್ಮಲೂರಿನ ಬಿಡಿಎ ಲೇಔಟ್ ನ ಶಂಕರಪ್ಪ(48) ಹಾಗೂ ರಾಮಮೂರ್ತಿನಗರ ಶಂಕರಪ್ಪ(48)ಬಂಧಿತ ಆರೋಪಿಗಳಾಗಿದ್ದು ,ಪ್ರಕರಣದಲ್ಲಿ ಭಾಗಿಯಾಗಿ ತಲೆಮರೆಸಿಕೊಂಡಿರುವ ಮತ್ತೊಬ್ಬ ಆರೋಪಿ ಬಂಧನಕ್ಕೆ ತೀವ್ರ ಶೋಧ ನಡೆಸಲಾಗಿದೆ.

ಬಂಧಿತ ಆರೋಪಿಗಳಿಂದ 1,27,61,200 ರೂ ನಗದು, ವಿವಿಧ ದಾಖಲಾತಿಗಳು ಕೃತ್ಯಕ್ಕೆ ಬಳಸಿದ್ದ 2 ಕಾರುಗಳ ವಶಪಡಿಸಿಕೊಂಡು ಹೆಚ್ಚಿನ ತನಿಖೆಯನ್ನು ಕೈಗೊಳ್ಳಲಾಗಿದೆ ಎಂದು ಪತ್ರಿಕಾಗೋಷ್ಠಿಯಲ್ಲಿ ನಗರ ಪೊಲೀಸ್ ಆಯುಕ್ತ ಸೀಮಂತ್ ಕುಮಾರ್ ಸಿಂಗ್ ಅವರು ತಿಳಿಸಿದರು.

ಯಲಹಂಕದ ವಿನಾಯಕ ನಗರದ ಸಿಂಧಿ ಕಾಲೇಜು ಪ್ರೊಫೆಸರ್ ಗಿರಿರಾಜ್ ಕುಮಾರ್ ಅವರ ಮನೆಗೆ ಕಳೆದ ಸೆ.19 ರಂದು ಬೆಳಿಗ್ಗೆ ಬಂಧಿತರಲ್ಲಿ ನಾಲ್ವರು ವ್ಯಕ್ತಿಗಳು ಸರ್ಕಾರಿ ಅಧಿಕಾರಿಗಳ ಸೋಗಿನಲ್ಲಿ ನುಗ್ಗಿ ಮನೆಯಲ್ಲಿದ್ದ ಪತ್ನಿ ಹಾಗೂ ಅವರ ತಾಯಿ ರವರುಗಳಿಗೆ ಹೆದರಿಸಿ ಮನೆಯನ್ನು ಶೋಧನೆ ಮಾಡಿ,ಮನೆಯಲ್ಲಿಟ್ಟಿದ್ದ ದಾಖಲಾತಿಗಳು ಹಾಗೂ 1.50 ಕೋಟಿ ನಗದು,50 ಗ್ರಾಂ ಚಿನ್ನಾಭರಣಗಳಿದ್ದ ಸೂಟ್ ಕೇಸ್ ಮತ್ತು ಬ್ಯಾಗ್‌ಗಳನ್ನು ದೋಚಿ ಮಾಡಿ ಪರಾರಿಯಾಗಿದ್ದರು.

ಈ ಸಂಬಂಧ ನೀಡಿದ ದೂರಿನ ಪ್ರಕರಣದ ತನಿಖೆಯನ್ನು ವಿವಿಧ ಆಯಾಮಗಳಲ್ಲಿ ತನಿಖೆಯನ್ನು ಕೈಗೊಂಡು ಯಲಹಂಕ ಪೊಲೀಸರು ಖಚಿತ ಮಾಹಿತಿಯನ್ನು ಆಧರಿಸಿ ಸೆ.23 ರಂದು ಸಂಜಯ್ ನಗರದಲ್ಲಿ ಓರ್ವನನ್ನು ಬಂಧಿಸಿ ವಿಚಾರಣೆ ನಡೆಸಿದಾಗ ಸುಲಿಗೆ ತಪ್ಪೊಪ್ಪಿಕೊಂಡು ಕೃತ್ಯದಲ್ಲಿ 7 ಮಂದಿ ಸಹಚರರು ಭಾಗಿಯನ್ನು ಬಾಯ್ಬಿಟ್ಟಿದ್ದು, ಆತನ ಗೋಡನ್ ಹಾಗೂ ಕಚೇರಿಯಲ್ಲಿಟ್ಟ 38,80,200 ನಗದು ಹಾಗೂ ದಾಖಲಾತಿಗಳಿದ್ದ ಮೂರು ಬ್ಯಾಗ್‌ಗಳು ಈ ಕೃತ್ಯಕ್ಕೆ ಆರೋಪಿಯು ಉಪಯೋಗಿಸಿ ಕಾರನ್ನು ವಶಪಡಿಸಿಕೊಳ್ಳಲಾಯಿತು.

ಅದೇ ದಿನ ತನಿಖೆಯನ್ನು ಮುಂದುವರೆಸಿ, ಅರೋಪಿಯು ನೀಡಿದ ಮಾಹಿತಿ ಮೇರೆಗೆ ಕೃತ್ಯದಲ್ಲಿ ಬಾಗಿಯಾಗಿದ್ದ 2ನೇ ಆರೋಪಿಯನ್ನು ಅಂದ್ರಪ್ರದೇಶದ ರೇಣುಕಾಮಾಪಲ್ಲಿ ಗ್ರಾಮದಲ್ಲಿ, 3ನೇ ಆರೋಪಿಯನ್ನು ವಿಜಯನಗರದ ಚೋಳರಪಾಳ್ಯದಲ್ಲಿ 4 ನೇ ಹಾಗೂ 5ನೇ ವ್ಯಕ್ತಿಗಳನ್ನು ಶ್ರೀನಗರದಲ್ಲಿ ಬಂಧಿಸಲಾಗಿದೆ.

ಕಳೆದ ಸೆ.24 ರಂದು ಈ ಪ್ರಕರಣದಲ್ಲಿ ಬಾಗಿಯಾಗಿದ್ದ 6ನೇ ವ್ಯಕ್ತಿಯನ್ನು ರಾಮಮೂರ್ತಿನಗರದಲ್ಲಿ ಬಂಧಿಸಿ ವಿಚಾರಣೆ ನಡೆಸಿದಾಗ ಪ್ರಕರಣದಲ್ಲಿ ಭಾಗಿಯಾಗಿರುವುದನ್ನು ಒಪ್ಪಿಕೊಂಡಿದ್ದಾನೆ.

ಎಲ್ಲಾ ಆರೋಪಿಗಳನ್ನು ಸುದೀರ್ಘ ವಿಚಾರಣೆ ನಡೆಸಿ ಪ್ರಕರಣದಲ್ಲಿ ಬಾಗಿಯಾಗಿದ್ದ



ದೊಮ್ಮಲೂರಿನ ಆರೋಪಿಯು ಗಿರಿರಾಜ್ ಕುಮಾರ್ ಅವರ ಮನೆಯಲ್ಲಿ ಚಾಲಕನಾಗಿ ಕೆಲಸ ಮಾಡುತ್ತಿದ್ದು,ಈತನೇ ಮನೆಯಲ್ಲಿ ಹಣವಿರುವುದಾಗಿ ನೀಡಿದ ಸುಳಿವಿನ ಮೇರೆಗೆ ಇತರೆ ಆರೋಪಿಗಳೆಲ್ಲರೂ ಸೇರಿ ಸಂಚು ರೂಪಿಸಿ ನಾಲ್ವರು ಮನೆಗೆ ನುಗ್ಗಿ ಸರ್ಕಾರಿ ಅಧಿಕಾರಿಗಳೆಂದು ತಿಳಿಸಿದರೆ, ಉಳಿದ 4 ಆರೋಪಿಗಳು ಮನೆಯ ಹೊರಗಡೆ ನಿಂತು ಸದರಿ ಮನೆಗೆ ಬೇರೆ ಯಾರಾದರೂ ಬರುತ್ತಾರೆಂಬುದರ ಬಗ್ಗೆ ನಿಗಾವಹಿಸಿರುವುದು ತನಿಖೆಯಲ್ಲಿ ಪತ್ತೆಯಾಗಿದೆ.

ದೋಚಿದ ಹಣದ ಪೈಕಿ ಸ್ವಲ್ಪ ಹಣವನ್ನು 2ನೇ ಅರೋಪಿಯು ವಾಸವಿರುವ ಹೈದರಾಬಾದ್ ವಾಸದ ಮನೆಯಿಂದ 55 ಲಕ್ಷ 500 ರೂಗಳನ್ನು, ಆತನ ಸಂಬಂದಿಕ ಆಂದ್ರಪ್ರದೇಶದ ರಾಣಿಮಾಕಾಪಲ್ಲಿಯ ಗ್ರಾಮದ ಮನೆಯಿಂದ 25,80,500 ರೂಗಳನ್ನು ವಶಪಡಿಸಿಕೊಳ್ಳಲಾಯಿತು. ಪ್ರಕರಣದ 3ನೇ ಆರೋಪಿಯು ವಿಜಯನಗರ ಚೋಳರಪಾಳ್ಯದ ವಾಸದ ಮನೆಯಿಂದ 1,50 ಲಕ್ಷ ರೂ ಹಾಗೂ ಕೃತ್ಯಕ್ಕೆ ಉಪಯೋಗಿಸಿದ ಮಾರುತಿ ಓಮಿನಿ ಕಾರನ್ನು ಜಪ್ತಿ ಮಾಡಲಾಗಿದೆ

ತನಿಖೆಯನ್ನು ಮುಂದುವರೆಸಿ ಪ್ರಕರಣದ 6ನೇ ಆರೋಪಿ ಶಂಕರಪ್ಪ ವಾಸವಾಗಿರುವ ದೊಮ್ಮಲೂರಿನ ಮನೆಯಿಂದ 4 ಲಕ್ಷ ರೂಗಳನ್ನು,7ನೇ ಆರೋಪಿಯ ರಾಮೂರ್ತಿನಗರದ ಮನೆಯಿಂದ 2,50 ಲಕ್ಷ ನಗದನ್ನು ವಶಪಡಿಸಿಕೊಳ್ಳಲಾಗಿದೆ.

ಈಶಾನ್ಯ ವಿಭಾಗದ ಉಪ ಪೊಲೀಸ್ ಆಯುಕ್ತ.ವಿ.ಜೆ. ಸಜೀತ್ ಅವರ ಮಾರ್ಗದರ್ಶನದಲ್ಲಿ ಯಲಹಂಕ ಪೊಲೀಸ್ ಇನ್ಸ್‌ಪೆಕ್ಟರ್ ಎಂ.ಎಲ್.ಕೃಷ್ಣಮೂರ್ತಿ ಮತ್ತವರ ಸಿಬ್ಬಂದಿಗಳ ತಂಡ ಪ್ರಕರಣವನ್ನು ಪತ್ತೆಮಾಡುವಲ್ಲಿ ಯಶಸ್ವಿಯಾಗಿದೆ ಎಂದು ತಿಳಿಸಿದರು.

ಪ್ರೊಫೆಸರ್ ಗಿರಿರಾಜ್ ಕುಮಾರ್ ಅವರು ಜಮೀನು ಖರೀದಿಗೆ ಇಷ್ಟೊಂದು ಪ್ರಮಾಣದ ಹಣವನ್ನು ಮನೆಯಲ್ಲಿ ತಂದಿಟ್ಟುಕೊಂಡಿದ್ದು ಅದನ್ನು ನೋಡಿದ್ದ ಚಾಲಕ ಶಂಕರಪ್ಪ ಡಕಾಯಿತಿ ಮಾಡಿಸುರುವುದು ತನಿಖೆಯಲ್ಲಿ ಪತ್ತೆಯಾಗಿದೆ ಎಂದು ಹೇಳಿದರು.

# ಯುಪಿಎ ಸರ್ಕಾರದಿಂದ ಕೃಷಿ ವಲಯ ನಿರ್ಲಕ್ಷ್ಯ



**ನವದೆಹಲಿ,ಅ. 11–** ದೇಶದಲ್ಲಿ 2004 ರಿಂದ 2014 ರವರೆಗೆ ಅಧಿಕಾರದಲ್ಲಿದ್ದ ಕಾಂಗ್ರೆಸ್ ನೇತೃತ್ವದ ಯುಪಿಎ ಸರ್ಕಾರ ಕೃಷಿ ವಲಯವನ್ನು ನಿರ್ಲಕ್ಷಿಸಿತ್ತು ಎಂದು ಪ್ರಧಾನಿ ನರೇಂದ್ರ ಮೋದಿ ಇಂದಿಲ್ಲಿ ತೀವ್ರ ವಾಗ್ದಾಳಿ ನಡೆಸಿದ್ದಾರೆ.

ಬಿಜೆಪಿ ನೇತೃತ್ವದ ರಾಷ್ಟ್ರೀಯ ಪ್ರಜಾಸತ್ತಾತ್ಮಕ ಒಕ್ಕೂಟ –ಎನ್‌ಡಿಎ ಕೇಂದ್ರದಲ್ಲಿ ಅಧಿಕಾರಕ್ಕೆ ಬಂದಾಗಿನಿಂದ, ಕಳೆದ 11 ವರ್ಷಗಳಲ್ಲಿ ರೈತರನ್ನು ಬಲಪಡಿಸಲು ಮತ್ತು ಸ್ವಾವಲಂಬಿಗಳನ್ನಾಗಿ ಮಾಡಲು ಹಲವಾರು ಕ್ರಮ ತೆಗೆದುಕೊಳ್ಳಲಾಗಿದೆ ಎಂದು ತಿಳಿಸಿದ್ದಾರೆ.

ದೆಹಲಿಯ ಭಾರತೀಯ ಕೃಷಿ ಸಂಶೋಧನಾ ಸಂಸ್ಥೆಯಲ್ಲಿ ನಡೆದ ವಿಶೇಷ ಕೃಷಿ ಕಾರ್ಯಕ್ರಮದಲ್ಲಿ ಮಾತನಾಡಿದ ಅವರು

ಕಳೆದ ತಿಂಗಳು ಜಾರಿಗೆ ಬಂದ ಜಿಎಸ್‌ಟಿ ಸುಧಾರಣೆ ರೈತರಿಗೆ ವರದಾನವಾಗಿದೆ ಎಂದಿದ್ದಾರೆ.

ರೈತರಿಗೆ ಮತ್ತು ದೇಶದ ಗ್ರಾಮೀಣ ವಲಯಕ್ಕೆ ಮತ್ತಷ್ಟು ಪ್ರಯೋಜನವಾಗಿದೆ .ರೈತರ ಆದಾಯವನ್ನು ಹೆಚ್ಚಿಸುವ ಮತ್ತು ಅವರ ಉತ್ಪಾದನಾ ವೆಚ್ಚವನ್ನು ಕಡಿಮೆ ಮಾಡುವ ಗುರಿಯನ್ನು ತಮ್ಮ ಸರ್ಕಾರ ಹೊಂದಿದೆ ಎಂದು ಅವರು ಹೇಳಿದ್ದಾರೆ.

ಯುಪಿಎ ಸರ್ಕಾರದ 10 ವರ್ಷಗಳಲ್ಲಿ 5 ಲಕ್ಷ ಕೋಟಿ ರೂ. ಸಬ್ಸಿಡಿಗೆ ಹೋಲಿಸಿದರೆ ಎನ್‌ಡಿಎ ಕಳೆದ 10 ವರ್ಷಗಳಲ್ಲಿ ರಸಗೊಬ್ಬರಗಳಿಗೆ 13 ಲಕ್ಷ ಕೋಟಿ ರೂ. ಸಬ್ಸಿಡಿ ನೀಡಿದೆ ಎಂದು ಅವರು ತಿಳಿಸಿದ್ದಾರೆ.

ಕಾಲ ಬದಲಾದಂತೆ ಕೃಷಿಗೆ ಸರ್ಕಾರದ ಬೆಂಬಲ ಸಿಗುವುದು ಬಹಳ ಮುಖ್ಯ. ದುರದೃಷ್ಟವಶಾತ್, ಹಿಂದಿನ ಸರ್ಕಾರಗಳು ಕೃಷಿಯನ್ನು ಕೈಬಿಟ್ಟವು. ಸರ್ಕಾರಕ್ಕೆ ಕೃಷಿಯ ಬಗ್ಗೆ ಯಾವುದೇ ದೃಷ್ಟಿಕೋನ ಅಥವಾ ಚಿಂತನೆ ಇರಲಿಲ್ಲ. ಕೃಷಿಗೆ ಸಂಬಂಧಿಸಿದ ವಿವಿಧ ಸರ್ಕಾರಿ ಇಲಾಖೆಗಳು ತಮ್ಮದೇ ಆದ ರೀತಿಯಲ್ಲಿ ಕಾರ್ಯನಿರ್ವಹಿಸುತ್ತಿದ್ದವು, ಇದು ಭಾರತದ ಕೃಷಿ ವ್ಯವಸ್ಥೆಯನ್ನು ನಿರಂತರವಾಗಿ ದುರ್ಬಲಗೊಳಿಸಿದ್ದವು ಎಂದು ಕಾಂಗ್ರೆಸ್ ವಿರುದ್ಧ ಹರಿಹಾಯ್ದಿದ್ದಾರೆ.

"ಹಿಂದಿನ ಸರ್ಕಾರಗಳು ಕೃಷಿಯ ಬಗ್ಗೆ ಹೊಂದಿದ್ದ ನಿರ್ಲಕ್ಷ್ಯ ಮನೋಭಾವವನ್ನು ಎನ್ ಡಿಎ ಸರ್ಕಾರ ಅಧಿಕಾರಕ್ಕೆ ಬಂದ ನಂತರ ಬದಲಾಯಿಸಿದ್ದೇವೆ. ಬೀಜಗಳಿಂದ ಮಾರುಕಟ್ಟೆಯವರೆಗೆ ರೈತರ ಅನುಕೂಲಕ್ಕಾಗಿ ಲೆಕ್ಕವಿಲ್ಲದಷ್ಟು ಸುಧಾರಣೆಗಳನ್ನು ಜಾರಿ ಮಾಡಿದ್ದೇವೆ ಎಂದು ತಿಳಿಸಿದ್ದಾರೆ.

ದೇಶದ ಕೃಷಿ ರಫ್ತು ಬಹುತೇಕ ದ್ವಿಗುಣಗೊಂಡಿದೆ . ಧಾನ್ಯಗಳು ಮತ್ತು ಹಣ್ಣುಗಳು ಮತ್ತು ತರಕಾರಿಗಳ ಉತ್ಪಾದನೆಯು ಕ್ರಮವಾಗಿ ಸುಮಾರು 90 ಮಿಲಿಯನ್ ಮೆಟ್ರಿಕ್ ಟನ್ ಮತ್ತು 64 ಮಿಲಿಯನ್ ಮೆಟ್ರಿಕ್ ಟನ್‌ಗಳಷ್ಟು ಹೆಚ್ಚಾಗಿದೆ 2014 ರಿಂದ ಭಾರತದ ಜೇನುತುಪ್ಪದ ಉತ್ಪಾದನೆ ದ್ವಿಗುಣಗೊಂಡಿದೆ ಎಂದು ಅವರು ಹೇಳಿದ್ದಾರೆ.

ಭಾರತ ಅಭಿವೃದ್ಧಿ ಹೊಂದಬೇಕಾದರೆ ಪ್ರತಿಯೊಂದು ಕ್ಷೇತ್ರದಲ್ಲೂ ನಿರಂತರವಾಗಿ ಸುಧಾರಣೆ ಕಾಣಬೇಕು ದೇಶದ ಮನೋಧರ್ಮ ಹೇಗಿದೆಯೆಂದರೆ ಅದು ಕೆಲವೇ ಸಾಧನೆಗಳಿಂದ ತೃಪ್ತವಾಗುವುದಿಲ್ಲ ಎಂದು ತಿಳಿಸಿದ್ದಾರೆ.

ಅವಕಾಶಗಳಿಂದ ವಂಚಿತರಿಗೆ ಆದ್ಯತೆ ನೀಡಿದಾಗ ಮತ್ತು ಹಿಂದುಳಿದ ಪ್ರದೇಶಗಳ ಮೇಲೆ ಕೇಂದ್ರೀಕರಿಸಿದಾಗ, ಫಲಿತಾಂಶ ಬರಲಿದೆ. ದೇಶದ ಮಹತ್ವಾಕಾಂಕ್ಷೆಯ ಜಿಲ್ಲೆಗಳಲ್ಲಿ, ತಾಯಂದಿರ ಮರಣ ಪ್ರಮಾಣ ಕಡಿಮೆಯಾಗಿದೆ, ಮಕ್ಕಳ ಆರೋಗ್ಯ ಸುಧಾರಿಸಿದೆ ಮತ್ತು ಶೈಕ್ಷಣಿಕ ಗುಣಮಟ್ಟ ಹೆಚ್ಚಾಗಿದೆ" ಎಂದು ಅವರು ಹೇಳಿದ್ದಾರೆ.

"ಬಹು ನಿಯತಾಂಕಗಳಲ್ಲಿ, ಈ ಜಿಲ್ಲೆಗಳು ಈಗ ಇತರ ಹಲವು ಜಿಲ್ಲೆಗಳಿಗಿಂತ ಉತ್ತಮವಾಗಿ ಕಾರ್ಯನಿರ್ವಹಿಸುತ್ತಿವೆ. ಈ ಮಾದರಿಯನ್ನು ಆಧರಿಸಿ, ಈಗ ಕೃಷಿಯಲ್ಲಿ ಹಿಂದುಳಿದಿರುವ 100 ಜಿಲ್ಲೆಗಳನ್ನು ಅಭಿವೃದ್ಧಿಪಡಿಸುವತ್ತ ಗಮನಹರಿಸಲು ಬಯಸುತ್ತೇವೆ, ಇದರಿಂದ ಅವು ಹೆಚ್ಚು ಮುಂದುವರಿದ ಜಿಲ್ಲೆಗಳೊಂದಿಗೆ ಸ್ಪರ್ಧಿಸಬಹುದು" ಎಂದು ಅವರು ತಿಳಿಸಿದ್ದಾರೆ.

# "ಡಿಸೆಂಬರ್‌ನಲ್ಲಿ ನಿತಿನ್ ಗಡ್ಕರಿ ಪ್ರಧಾನಿಯಾಗ್ತಾರೆ" : ಸಂತೋಷ್ ಲಾಡ್ ಭವಿಷ್ಯ

**ಬೆಂಗಳೂರು, ಅ.11–**ಡಿಸೆಂಬರ್‌ನಲ್ಲಿ ರಾಜಕೀಯ ಕ್ರಾಂತಿಯಾಗಲಿದ್ದು, ಪ್ರಧಾನಮಂತ್ರಿ ನರೇಂದ್ರ ಮೋದಿ ಅವರು ಬದಲಾಗುತ್ತಾರೆ, ನಿತಿನ್ ಗಡ್ಕರಿ ಹೊಸದಾಗಿ ಪ್ರಧಾನಿಯಾಗುತ್ತಾರೆ ಎಂದು ಕಾರ್ಮಿಕ ಸಚಿವ ಸಂತೋಷ್‌ಲಾಡ್ ಸ್ಫೋಟಕ ಹೇಳಿಕೆ ನೀಡಿದ್ದಾರೆ.

ಕ್ರೈಸ್ಟ್ ವಿಶ್ವವಿದ್ಯಾಲಯ ಅಸೋಷಿಯೇಟ್ ಡಿನ್ ಸಹಾಯಕ ಡಾ. ಸ್ವಪ್ನ ಎಸ್. ಅಧ್ಯಕ್ಷತೆಯಲ್ಲಿ ರಚಿಸಲಾಗಿದ್ದ ಋತುಚಕ್ರ ನೀತಿ ಕುರಿತು ಸಮಿತಿಯ ಸದಸ್ಯರ ಜೊತೆ ಚರ್ಚೆ ನಡೆಸಿ, ಅವರನ್ನು ಅಭಿನಂದಿಸಿದ ಬಳಿಕ ಸುದ್ದಿಗಾರರೊಂದಿಗೆ ಮಾತನಾಡಿದರು. ಮುಖ್ಯಮಂತ್ರಿಯವರು ಸಚಿವರನ್ನು ಔತಣಕೂಟಕ್ಕೆ ಕರೆದಿರುವುದು ವಿಶೇಷವೇನಿಲ್ಲ. ನಮಲ್ಲಿ ನವೆಂಬರ್ ಕ್ರಾಂತಿ ಎಂಬುದೇನಿಲ್ಲ. ಆದರೆ ಕೇಂದ್ರದಲ್ಲಿ ನಿತಿನ್ ಗಡ್ಕರಿ ಪ್ರಧಾನಿಯಾಗುತ್ತಾರೆ ಎಂದರು.

ಬಿಜೆಪಿಯಲ್ಲಿನ ಆಂತರಿಕ ಚರ್ಚೆಗಳನ್ನು ನಾನು ಹೇಳುತ್ತಿದ್ದೇನೆ. ಮೋದಿ ಅವರ ವಿರುದ್ಧ ಬಿಜೆಪಿಯ ನಾಯಕರಾಗಲಿ, ಮಾಧ್ಯಮದವರಾಗಲಿ ಮಾತನಾಡಲು ಅವಕಾಶ ಇಲ್ಲದಂತಹ ವಾತಾವರಣವಿದೆ. ಹೀಗಾಗಿ ಡಿಸೆಂಬರ್ ಒಳಗಾಗಿ ಬದಲಾವಣೆಯಾಗುತ್ತದೆ ಎಂದರು. ಪ್ರಧಾನಿಯವರು ತಮ ಹುದ್ದೆಯ ಜವಾಬ್ದಾರಿ ಮರೆತು ನಡೆದುಕೊಳ್ಳುತ್ತಿದ್ದಾರೆ. ವಿದೇಶಗಳಿಗೆ ಹೋದರೆ ಏನೋ ಒಂದು ಮಾತನಾಡುತ್ತಾರೆ. ವಿಧಾನಸಭೆ ಚುನಾವಣೆ ಪ್ರಚಾರಕ್ಕೆ ಹೋದಾಗ ಪ್ರಾಸ ಬದ್ಧವನ್ನಾಗಿ ಮಾತನಾಡುತ್ತಾರೆ. ಇದು ಪ್ರಧಾನಿ ಅವರ ಕೆಲಸವೇ? ಎಂದು ಆಕ್ಷೇಪಿಸಿದರು.



ರಾಜ್ಯ ಸರ್ಕಾರ ರೂಪಿಸಿರುವ ಋತುಚಕ್ರ ರಜೆ ನೀತಿಯ ಕಾರಣಕ್ಕಾಗಿ ಖಾಸಗಿ ಸಂಸ್ಥೆಯವರು ಮಹಿಳಾ ಉದ್ಯೋಗಿಗಳಿಗೆ ಅವಕಾಶ ನಿರಾಕರಿಸಿದರೆ, ಸರ್ಕಾರ ಮಧ್ಯಪ್ರವೇಶ ಮಾಡಲಿದೆ ಎಂದು ಎಚ್ಚರಿಕೆ ನೀಡಿದರು.ಇದೊಂದು ಪ್ರಗತಿಪರ ಮಸೂದೆ. ಎಲ್ಲರೂ ಇದನ್ನು ಸ್ವಾಗತಿಸಿದ್ದಾರೆ. ಈವರೆಗೂ ಯಾರೂ ವಿರೋಧ ಮಾಡಿರುವುದು ಕಂಡು ಬಂದಿಲ್ಲ. ಅಂತಹ ಸಂದರ್ಭ ಬಂದಾಗ ಪರಿಶೀಲಿಸುತ್ತೇವೆ ಎಂದರು.

# ಬಿಹಾರ ಫಲಿತಾಂಶ ನಂತರ ಸಂಪುಟ ಪುನಾರಚನೆ ಚರ್ಚೆ : ಸಚಿವ ಚೆಲುವರಾಯ ಸ್ವಾಮಿ

**ಮಂಡ್ಯ, ಅ.11–** ಬಿಹಾರ ವಿಧಾನಸಭೆ ಚುನಾವಣೆ ಫಲಿತಾಂಶ ನವೆಂಬರ್ 14ರಂದು ಪ್ರಕಟವಾಗಲಿದ್ದು, ಆ ಬಳಿಕ ಸಂಪುಟ ಪುನರ್ ರಚನೆಯ ಬಗ್ಗೆ ಮುಖ್ಯಮಂತ್ರಿ ಮತ್ತು ಪಕ್ಷ ಚರ್ಚೆ ಮಾಡಿ ನಿರ್ಧರಿಸಲಾಗುವುದು ಎಂದು ಕೃಷಿ ಸಚಿವ ಚೆಲುವರಾಯ ಸ್ವಾಮಿ ಹೇಳಿದ್ದಾರೆ.

ಸುದ್ದಿಗಾರರೊಂದಿಗೆ ಮಾತನಾಡಿದ ಅವರು, ಕಾಂಗ್ರೆಸ್‌ನ 138 ಮಂದಿ ಶಾಸಕರು ಸಚಿವರಾಗಬೇಕೆಂಬ ಆಕಾಂಕ್ಷೆ ಹೊಂದಿರುತ್ತಾರೆ. ಆದರೆ 34 ಮಂದಿಗೆ ಮಾತ್ರ ಅವಕಾಶ ಸಿಕ್ಕಿದೆ. ಪಂಚಾಯಿತಿಗಳಲ್ಲಿ 10 ತಿಂಗಳಿಗೆ ಅಧಿಕಾರ ಬದಲಾಗುತ್ತದೆ, ಸರ್ಕಾರದಲ್ಲಿ ಎರಡೂವರೆ ವರ್ಷದ ಬಳಿಕ ಬದಲಾವಣೆ ಕೇಳುವುದು ತಪ್ಪೆ?? ಎಂದು ಪ್ರಶ್ನಿಸಿದರು.

ಸಂಪುಟ ಪುನರ್ ರಚನೆಯ ವೇಳೆ 34 ಜನರಲ್ಲಿ ಯಾರನ್ನು ತೆಗೆಯುತ್ತಾರೋ ಗೊತ್ತಿಲ್ಲ. 10 ಜನ ತೆಗೆಯುತ್ತಾರೋ, 33 ಜನರನ್ನು ತೆಗೆಯುತ್ತಾರೋ ಎಂಬುದು ಪಕ್ಷಕ್ಕೆ ಬಿಟ್ಟ ವಿಚಾರ. ಸದ್ಯಕ್ಕೆ ಇದ್ಯಾವ ವಿಚಾರಗಳು ಇಲ್ಲ ಎಂದರು.ಸಚಿವರು ಜಿಲ್ಲೆಗಳಲ್ಲಿ ಯಾವ ರೀತಿಯ ಅಭಿವೃದ್ಧಿ ಕೆಲಸ ಮಾಡುತ್ತಿದ್ದಾರೆ. ಜಿಲ್ಲಾ ಉಸ್ತುವಾರಿ ಸಚಿವರಾಗಿ ನಿರ್ವಹಿಸುತ್ತಿರುವ ಜವಾ ಬ್ದಾರಿ ಬಗ್ಗೆ ಚರ್ಚೆ ಮಾಡಲು ಸಚಿವರ ಔತಣ ಕೂಟ ಆಯೋಜಿಸಿದ್ದಾರೆ. ಇದನ್ನು ಬೇರೆ ರೀತಿ ಬಿಂಬಿಸಬಾರದು, ಔತಣಕೂಟದಲ್ಲಿ ನಿರ್ಗ ಮಿಕ ಸಚಿವರಿಗೆ ಸಮಾಧಾನ ಪಡಿಸಲಾಗುವುದು ಎಂಬುವುದು ಕೇವಲ ವದಂತಿ ಎಂದರು.ಈ ಮುಂಗಾರಿನಲ್ಲಿ ಮಳೆಯಿಂದ ಹೆಚ್ಚು ಹಾನಿಯಾ ಗಿದೆ. ಕಾವೇರಿ ನದಿ ಪಾತ್ರದಲ್ಲೂ ಕೃಷಿ ಮತ್ತು ತೋಟಗಾರಿಕೆ ಬೆಲೆ ಹಾನಿಯಾಗಿದೆ. ಮಳೆ ನಿಂತ ಮೇಲೆ ನಿರ್ಧಿಷ್ಠ ಪ್ರಮಾಣದ ಅಂದಾಜನ್ನು ಜಂಟಿ ಸರ್ವೆ ಮೂಲಕ ಗುರುತಿಸಿ, ತಕ್ಷಣ ಪರಿಹಾರ ನೀಡಲಾಗುವುದು.ಈ ಮೊದಲು ಒಣ ಬೇಸಾಯಕ್ಕೆ 8,500, ನೀರಾವರಿಗೆ 22500 ರೂ.ಗಳನ್ನು ಹೆಕ್ಟೆರ್‌ಗೆ ಪರಿ ಹಾರ ನೀಡಲಾಗುತ್ತಿತ್ತು, ಅದನ್ನು ಹೆಚ್ಚಿಸಲಾಗಿದೆ.ರೈತರ ಜೊತೆ ಚರ್ಚಿಸಿ ಬೇಡಿಕೆಯಂತೆ ಒಣ ಬೇಸಾಯಕ್ಕೆ 17 ಸಾವಿರ, ನೀರಾವರಿಗೆ 21,500, ಬಹು ಮಾದರಿ ಬೆಲೆಗೆ 31 ಸಾವಿರ ರೂ. ಪರಿಹಾರವನ್ನು ನೀಡಲಾಗುತ್ತಿದೆ.ಒಂದು ತಿಂಗಳೊಳಗಾಗಿಯೇ ರೈತರ ಖಾತೆಗೆ ಪರಿಹಾರ ಹಣ ಪಾವತಿಸುವುದಾಗಿ ಹೇಳಿದರು.



ಯುವ ಮಾರ್ಗ

ಭಾನುವಾರ: 12–10–2025

# ಡಿವೈಎಫ್‌ನಿಂದ ಸಚಿವರಿಗೆ ಮನವಿ



**ಬಳ್ಳಾರಿ, ಅ.11–** ಭಾರತ ಪ್ರಜಾಸತ್ತಾತ್ಮಕ ಯುವಜನ ಫೆಡರೇಶನ್ ಡಿವೈಎಫ್.ಸಂಘಟನೆಯ ಜಿಲ್ಲಾ ಅಧ್ಯಕ್ಷರು ಯು.ಎರ್ರಿಸ್ವಾಮಿ ಅವರ ನೇತೃತ್ವದಲ್ಲಿ..ನಿನ್ನೆ ನೆಡದ ಕರ್ನಾಟಕ ರಾಜ್ಯ ಮಾಲಿನ್ಯ ನಿಯಂತ್ರಣ ಮಂಡಳಿಯ ಸುವರ್ಣ ಮಹೋತ್ಸವ ಸಮಾರಂಭಕ್ಕೆ ಬಳ್ಳಾರಿಗೆ ಆಗಮಿಸಿದ್ದ ಮಾನ್ಯ ಶ್ರೀ ಈಶ್ವರ್ ಖಂಡ್ರೆ ಅರಣ್ಯ ಜೀವಿ ಶಾಸ್ತ್ರ ಮತ್ತು ಪರಿಸರ ಖಾತೆ ಸಚಿವರು ಹಾಗೂ ಕರ್ನಾಟಕ ರಾಜ್ಯ ಮಾಲಿನ್ಯ ನಿಯಂತ್ರಣ ಮಂಡಳಿ ಅಧ್ಯಕ್ಷರು ನರೇಂದ್ರ ಸ್ವಾಮಿ ಇವರನ್ನು ಭೇಟಿ ಮಾಡಿ ಡಿ.ವೈ.ಎಫ್.ಐ ಸಂಘಟನೆಯ ಕಾರ್ಯಕರ್ತ ಆಲಂಬಾಷ ಅವರಿಗೆ ವ್ಯಾಟ್ಸಪ್ ಕಾಲ್ ಮಾಡಿ ಬಹಳ ಕೆಟ್ಟದಾಗಿ ಅವಚ್ಯ ಶಬ್ದಗಳಿಂದ ನಿಂದಿಸಿರುವ ಬಳ್ಳಾರಿ ಜಿಲ್ಲಾ ಮಾಲಿನ್ಯ ನಿಯಂತ್ರಣ ಮಂಡಳಿಯ ಪರಿಸರ ಅಧಿಕಾರಿ ಸಿದ್ದೇಶ್ವರ ಬಾಬು ವಿರುದ್ಧ ಸೂಕ್ತವಾದ ಕ್ರಮಕ್ಕಾಗಿ ಒತ್ತಾಯಿಸಿ ಮನವಿ ಪತ್ರ ಸಲ್ಲಿಸಲಾಯಿತು..

ಈ ಸಂದರ್ಭದಲ್ಲಿ ಡಿ.ವೈ.ಎಫ್.ಐ ಸಂಘಟನೆಯ ಜಿಲ್ಲಾ ಉಪಾಧ್ಯಕ್ಷರಾದ ಬೈಲಾ ಹನುಮಪ್ಪ ಜಿಲ್ಲಾ ಖಜಾಂಚಿ ಬಿಪಿ ನವೀನ್ ಕ್ರೀಡಾ ಅಧ್ಯಕ್ಷರು ಜಿ.ಎನ್ ಎರ್ರಿಸ್ವಾಮಿ ತಾ. ಅಧ್ಯಕ್ಷರು ಎ.ತಿಪ್ಪೆರುದ್ರ ತಾ.ಕಾರ್ಯದರ್ಶಿ ಹೆಚ್.ಎರ್ರಿಸ್ವಾಮಿ ಮಸ್ತಾನ್ ಸಾಬ್ ಕಾರೆಕಲ್ಲು ಆಲಂಭಾಷ ನಲ್ಲಚೆರವು.ಪರಮೇಶ್ ರಾಜು ಸೇರಿದಂತೆ ಇತರರು ಉಪಸ್ಥಿತರಿದ್ದರು

# ಮನೆ ಕೊಂಡಿ ಮುರಿದು 80 ಸಾವಿರ ರೂ.ನಗದು ಕಳವು

**ಕಲಬುರಗಿ,ಅ.11–**ಮನೆಯ ಮೇನ್ ಡೋರ್ ಕೊಂಡಿ ಮುರಿದು ಅಲಮಾರಿಯಲ್ಲಿಟ್ಟಿದ್ದ 80 ಸಾವಿರ ರೂಪಾಯಿ ನಗದು ಹಣ ಕಳವು ಮಾಡಿರುವ ಘಟನೆ ನಗರದ ಬಿದ್ದಾಪುರ ಕಾಲೋನಿಯಲ್ಲಿ ನಡೆದಿದೆ.

ಅಫಜಲಪುರ ತಾಲ್ಲೂಕಿನ ಅತನೂರ ಗ್ರಾಮದ ಪಿಡಿಒ ಆಗಿರುವ ಅನುಸೂಯಾ ಆನಂದ ರದ್ದೇವಾಡಿ ಎಂಬುವವರ ಮನೆ ಮೇನ್ ಡೋರ್ ಕೊಂಡಿ ಮುರಿದು ಕಳ್ಳರು ಹಣ ದೋಚಿಕೊಂಡು ಹೋಗಿದ್ದು, ಅವರು ಈ ಸಂಬಂಧ ಅಶೋಕ ನಗರ ಪೊಲೀಸ್ ಠಾಣೆಯಲ್ಲಿ ದೂರು ಸಲ್ಲಿಸಿದ್ದಾರೆ. ತನಿಖೆ ನಡೆದಿದೆ.

# ಬಾಲಕಿಯ ಕುಟುಂಬಕ್ಕೆ ಶಾಸಕಿ ಕನೀಜ್ ಫಾತಿಮಾ ಭೇಟಿ, ಸಾಂತ್ವನ



**ಕಲಬುರಗಿ,ಅ.11–**ಕಲಬುರಗಿ ಉತ್ತರ ಕ್ಷೇತ್ರದ ಶಾಸಕಿ ಮತ್ತು ಕರ್ನಾಟಕ ರೇಷ್ಮೆ ಉದ್ಯಮ ನಿಗಮದ ಅಧ್ಯಕ್ಷೆ ಕನೀಜ್ ಫಾತಿಮಾ, ಕೆಪಿಸಿಸಿ ಸದಸ್ಯ ಫರಾಜ್ ಉಲ್ ಇಸ್ಲಾಂ ಅವರು ಮೈಸೂರಿನಲ್ಲಿ ಕ್ರೂರವಾಗಿ ಅತ್ಯಾಚಾರಕ್ಕೊಳಗಾಗಿ ಕೊಲೆಯಾದ 9 ವರ್ಷದ ಬಾಲಕಿಯ ಕುಟುಂಬದ ಸದಸ್ಯರನ್ನು ಭೇಟಿ ಮಾಡಿದರು.

ಕಲಬುರಗಿಯ ಸೂಪರ್ ಮಾರ್ಕೆಟ್‌ನಲ್ಲಿ ಬಾಲಕಿಯ ಕುಟುಂಬದ ಸದಸ್ಯರನ್ನು ಭೇಟಿ ಮಾಡಿ ಸಾಂತ್ವನ ಹೇಳಿದರು. ತಮ್ಮ ಭೇಟಿಯ ಸಮಯದಲ್ಲಿ, ಕನೀಜ್ ಫಾತಿಮಾ ಮೇಡಂ ಹೃದಯ ವಿದ್ರಾವಕ ಕುಟುಂಬಕ್ಕೆ ಸಾಂತ್ವನ ಹೇಳಿದರು ಮತ್ತು ಸರ್ಕಾರವು ಅವರಿಗೆ ಸಾಧ್ಯವಿರುವ ಎಲ್ಲ ರೀತಿಯಲ್ಲಿ ಸಹಾಯ ಮಾಡುತ್ತದೆ ಮತ್ತು ಬೆಂಬಲವನ್ನು ನೀಡುತ್ತದೆ ಎಂದು ಭರವಸೆ ನೀಡಿದರು. ಅವರು ಈ ಘೋರ ಕೃತ್ಯವನ್ನು ಖಂಡಿಸಿದರು, ಇಂತಹ ಅಮಾನವೀಯ ಘಟನೆಗಳು ಸಮಾಜದ ಆತ್ಮಸಾಕ್ಷಿಯನ್ನು ಅಲುಗಾಡಿಸುತ್ತವೆ ಎಂದು ಹೇಳಿದರು.

ಅಪರಾಧಿಯ ವಿರುದ್ಧ ಕಠಿಣ ಕಾನೂನು ಕ್ರಮ ಕೈಗೊಳ್ಳಲಾಗುವುದು ಎಂದು ಅವರು ಕುಟುಂಬಕ್ಕೆ ಭರವಸೆ ನೀಡಿದರು ಮತ್ತು ನ್ಯಾಯ ಸಂಪೂರ್ಣವಾಗಿ ದೊರೆಯುವವರೆಗೆ ಅವರ ಬೆಂಬಲಕ್ಕೆ ನಿಲ್ಲುವ ಬದ್ಧತೆಯನ್ನು ಪುನರುಚ್ಚರಿಸಿದರು.

ಕೆಪಿಸಿಸಿ ಸದಸ್ಯ ಫರಾಜ್ ಉಲ್ ಇಸ್ಲಾಂ ಘಟನೆಯ ಬಗ್ಗೆ ತೀವ್ರ ದುಃಖ ವ್ಯಕ್ತಪಡಿಸಿದರು, ಈ ಕೃತ್ಯವು ಹೃದಯ ವಿದ್ರಾವಕ ಮತ್ತು ಕಲ್ಪನೆಗೆ ಮೀರಿದ್ದು, ವಿಶೇಷವಾಗಿ ಬಲಿಪಶು ಕೇವಲ ಪ್ರೀತಿ ಮತ್ತು ರಕ್ಷಣೆಗೆ ಅರ್ಹಳಾದ ಮಗುವಾಗಿದ್ದು ಕ್ರೌರ್ಯವಲ್ಲ ಎಂದು ಹೇಳಿದರು. ಇಂತಹ ದುರಂತಗಳು ಮತ್ತೆಂದೂ ಸಂಭವಿಸದಂತೆ ಸಮಾಜವು ಖಚಿತಪಡಿಸಿಕೊಳ್ಳಬೇಕು ಎಂದು ಅವರು ಒತ್ತಾಯಿಸಿದರು.

ಸರ್ಕಾರವು ಅಪರಾಧಿಗೆ ಕಠಿಣ ಶಿಕ್ಷೆ ವಿಧಿಸಬೇಕು ಎಂದು ಆಗ್ರಹಿಸಿದರು.

# ಸಾಮಾಜಿಕ ಮತ್ತು ಶೈಕ್ಷಣಿಕ ಸಮೀಕ್ಷೆ;ಗಿಲ್ಲೇಸೂಗೂರು ಹೋಬಳಿ ಸಮೀಕ್ಷಾ ಪ್ರಗತಿ ಪರಿಶೀಲನಾ ಸಭೆ

ಯುವ ಮಾರ್ಗ ಸುದ್ದಿ



**ಗಿಲ್ಲೇಸೂಗೂರು,ಅ.11–**ಸಾಮಾಜಿಕ ಮತ್ತು ಶೈಕ್ಷಣಿಕ ಸಮೀಕ್ಷೆ 2025 ರ ಭಾಗವಾಗಿ ಗಿಲ್ಲೇಸೂಗೂರು ಹೋಬಳಿ ವ್ಯಾಪ್ತಿಯ ಸಮೀಕ್ಷಾ ಪ್ರಗತಿ ಪರಿಶೀಲನಾ ಸಭೆಯನ್ನು ಗಿಲ್ಲೇಸೂಗೂರು ಸರ್ಕಾರಿ ಮಾದರಿ ಹಿರಿಯ ಪ್ರಾಥಮಿಕ ಶಾಲೆಯಲ್ಲಿ ಹಮ್ಮಿಕೊಳ್ಳಲಾಗಿತ್ತು.

ಈ ಸಭೆಯ ಅಧ್ಯಕ್ಷತೆಯನ್ನು ಸಮೀಕ್ಷೆಯ ತಾಲೂಕು ನೋಡಲ್ ಅಧಿಕಾರಿಗಳು ಹಾಗೂ ರೇಷ್ಮೆ ಇಲಾಖೆಯ ಉಪನಿರ್ದೇಶಕರಾದ ರಾಜೇಂದ್ರ ಅವರು ವಹಿಸಿದ್ದರು.

ಸಭೆಯಲ್ಲಿ ಪ್ರಾಸ್ತಾವಿಕವಾಗಿ ಮಾತನಾಡಿದ ಗಿಲ್ಲೇಸೂಗೂರು ಸಿ.ಡಿ.ಪಿ.ಓ ಮಹೇಶ ಅವರು, ಸಮೀಕ್ಷಾ ಕಾರ್ಯದಲ್ಲಿ ಎಲ್ಲರೂ ಸಂಪೂರ್ಣವಾಗಿ ತೊಡಗಿಸಿಕೊಂಡು, ಪ್ರತಿ ಮನೆಯ ಎಲ್ಲಾ ಸದಸ್ಯರ ಮಾಹಿತಿಯನ್ನು ಕಡ್ಡಾಯವಾಗಿ ಪಡೆಯಬೇಕು ಎಂದು ಸಮೀಕ್ಷಾದಾರರಿಗೆ ತಿಳಿಸಿದರು. ಸಮೀಕ್ಷಾದಾರರು ಎದುರಿಸುತ್ತಿದ್ದ ಸಮಸ್ಯೆಗಳ ಕುರಿತು ಚರ್ಚಿಸಿ ಸೂಕ್ತ ಪರಿಹಾರವನ್ನು ನೀಡಲಾಯಿತು.

ಅಧ್ಯಕ್ಷತೆ ವಹಿಸಿದ್ದ ರಾಜೇಂದ್ರ ಅವರು ಮಾತನಾಡಿ, ತಾಲೂಕಿನ ಸಮೀಕ್ಷಾ ಪ್ರಗತಿ ಸಾಧಿಸಲು ಎಲ್ಲ ಸಮೀಕ್ಷಾದಾರರು ಪ್ರಯತ್ನಿಸುತ್ತಿದ್ದು, ಇನ್ನಷ್ಟು ಪ್ರಯತ್ನ ಹಾಕಿ ನಿಗದಿತ ಗುರಿಯನ್ನು ಶೀಘ್ರವಾಗಿ ತಲುಪುವಂತೆ ಸಲಹೆ ನೀಡಿದರು.

ಗಿಲ್ಲೇಸೂಗೂರು, ಎನ್. ಮಲ್ಕಾಪೂರ, ಗಾಣದಾಳ ಹಾಗೂ ಬಿಚ್ಚಾಲಿ ಪಂಚಾಯಿತಿಗಳ ವ್ಯಾಪ್ತಿಯ ಸಮೀಕ್ಷಾದಾರರ ಪ್ರಗತಿ ಪರಿಶೀಲನೆಗಾಗಿ ಈ ಸಭೆಯನ್ನು ಆಯೋಜಿಸಲಾಗಿತ್ತು. ಈ ಸಂದರ್ಭದಲ್ಲಿ ನಗರ ವ್ಯಾಪ್ತಿಯ ಸಿ.ಡಿ.ಪಿ.ಓ. ಮಂಜುನಾಥ್, ಗಿಲ್ಲೇಸೂಗೂರು ಗ್ರಾಮ ಪಂಚಾಯತ್ ಮೇಲ್ವಿಚಾರಕರಾದ ಸಂತೋಷ್, ಎನ್. ಮಲ್ಕಾಪೂರ ಪಂಚಾಯಿತಿ ಮೇಲ್ವಿಚಾರಕರಾದ ಸಾಜೀದ್ ಹಾಗೂ ನಾಲ್ಕೂ ಪಂಚಾಯಿತಿಗಳ ಸಮೀಕ್ಷಾದಾರರು ಹಾಜರಿದ್ದರು.

# ಅ.30 ರಿಂದ ಶ್ರೀವಿಜಯದಾಸರ 270 ನೇ ಆರಾಧನಾ ಮಹೋತ್ಸವ

ಯುವ ಮಾರ್ಗ ಸುದ್ದಿ

**ಮಾನ್ವಿ,ಅ.11–**ತಾಲೂಕಿನ ಚೀಕಲಪರ್ವಿ ಗ್ರಾಮದಲ್ಲಿನ ಶ್ರೀ ಮಂತ್ರಾಲಯ ರಾಘವೇಂದ್ರ ಸ್ವಾಮಿಗಳ ಮಠ ಹಾಗೂ ಶ್ರೀ ಲಕ್ಷ್ಮೀ ನರಸಿಂಹ ಸನ್ನಿಧಾನ, ವಿಜಯದಾಸರ ಕಟ್ಟೆಯಲ್ಲಿ ನಾಡಿನ ದಾಸ ಶ್ರೇಷ್ಟರಲ್ಲಿ ಒಬ್ಬರಾದ ಶ್ರೀ ವಿಜಯದಾಸರ 270 ನೇ ಆರಾಧನಾ ಮಹೋತ್ಸವ ಅಂಗವಾಗಿ ವಿವಿಧ ಧಾರ್ಮಿಕ ಕಾರ್ಯಕ್ರಮಗಳನ್ನು ಹಮ್ಮಿಕೊಳ್ಳಲಾಗಿದ್ದೆ ಆರಾಧನೆಯ ಮೂರು ದಿನಗಳ ಕಾಲ ಪ್ರತಿದಿನ ಸುಪ್ರಭಾತ ,ಮಿರ್ಮಾಲ್ಯ ವಿಸರ್ಜನೆ, ಅಷ್ಟಘತ್ತರ ಪಾರಾಯಣ ಮತ್ತು ಶ್ರೀ ವಿಜಯಕವಚ ಪಾರಾಯಣ, ಫಲಪಂಚಾಮೃತ ಅಭೀಷೇಕ, ಕನಕ ಮಹಾಪೂಜೆ, ಅರ್ಚನೆ, ಅಲಂಕಾರ, ಹಸ್ತೋದಕ, ಮಹಾಮಂಗಳಾರತಿ, ಸಂಜೆ ಪಲ್ಲಕ್ಕಿ ಸೇವೆ, ಸ್ವಸ್ತಿವಾಚಾನ,ಮಹಾಮಂಗಳಾರತಿ, ಶ್ರೇಯಃ ಪ್ರಾರ್ಥನೆ ವಿವಿಧ ವಿದ್ವಾಂಸರಿಂದ ಪ್ರವಚನ, ಶ್ರೀ ತಿರುಮಲ ತಿರುಪತಿ ದೇವಸ್ಥಾನ ಹಾಗೂ ದಾಸಸಾಹಿತ್ಯ ಪ್ರಾಜೆಕ್ಟ್ ಹಾಗೂ ಶ್ರೀ ಗುರುಸಾರ್ವಭೌಮ ದಾಸಸಾಹಿತ್ಯ ಪ್ರಾಜೆಕ್ಟ್ ಮಂತ್ರಾಲಯರವರಿಂದ ಜ್ಞಾನಸತ್ರ, ಸಾಂಸ್ಕೃತಿ ಕಾರ್ಯಕ್ರಮಗಳು ನಡೆಯಲಿವೆ, ಅ.29 ರಂದು ಸಂಜೆ ಧ್ವಜಾರೋಹಣ, ಗೋಪೂಜೆ, ಧಾನ್ಯ ಪೂಜೆ, ಲಕ್ಷ್ಮೀ ಪೂಜೆ,ಸ್ವಸ್ತಿವಾಚನ ಮತ್ತು ಮಹಾಮಂಗಳಾರತಿ, ಅ.30ರಂದು ಪೂರ್ವಾರಾಧನೆ,ಅ.31 ರಂದು ಮಧ್ಯಾರಾಧನೆ ಅಂಗವಾಗಿ ಬೆಳಿಗ್ಗೆ 11 ಕ್ಕೆ ಗ್ರಾಮದ ರಾಜಬೀದಿಗಳಲ್ಲಿ ವಿವಿಧ ಭಜನಾ ಮಂಡಳಿಯವರೊಂದಿಗೆ ಗೋಪಾಳ, ಯಾಯಿವಾರ ಹಾಗೂ ಶ್ರೀ ವಿಜಯದಾಸರ ಕಟ್ಟೆಯಲ್ಲಿ ಶ್ರೀ ಮಂತ್ರಾಲಯ ರಾಘವೇಂದ್ರ ಸ್ವಾಮಿಗಳ ಮಠದ ಶ್ರೀ ಸುಬುಧೇಂದ್ರ ತೀರ್ಥ ಶ್ರೀಪಾದಂಗಳವರಿಂದ ಸಂಸ್ಥಾನ ಪೂಜೆ, ಸಾಮೂಹಿಕ ಪಾದ ಪೂಜೆ, ಶ್ರೀ ಮಠದ ಶಿಷ್ಯರಿಗೆ ತಪ್ತ ಮುದ್ರಾಧಾರಣೆ ನ,1 ರಂದು ಉತ್ತರಾರಾಧನೆ ಅಂಗವಾಗಿ ಬೆಳಿಗ್ಗೆ 11.30ಕ್ಕೆ ಮಹಾರಥೋತ್ಸವ ಸೇರಿದಂತೆ ವಿವಿಧ ಕಾರ್ಯಕ್ರಮಗಳನ್ನು ಹಮ್ಮಿಕೊಳ್ಳಲಾಗಿದ್ದು ಹೆಚ್ಚಿನ ಸಂಖ್ಯೆಯಲ್ಲಿ ಭಕ್ತರು ಆರಾಧನಾ ಮಹೋತ್ಸವಕ್ಕೆ ಆಗಮಿಸುವಂತೆ ಶ್ರೀ ಲಕ್ಷ್ಮೀ ನರಸಿಂಹ ಸನ್ನಿಧಾನ, ವಿಜಯದಾಸರ ಕಟ್ಟೆಯ ಗೌರವ ವಿಚಾರಣಾಕರ್ತರಾದ ವಿಜಯೇಂದ್ರಾಚಾರ್ ಇಭರಾಮಪೂರ್ ಪ್ರಕಟಣೆಯಲ್ಲಿ ತಿಳಿಸಿದ್ದಾರೆ.

# ಬಿ.ಗಣೇಕಲ್ ಗ್ರಾಮದಲ್ಲಿ ಸಾಮಾಜಿಕ ಮತ್ತು ಶೈಕ್ಷಣಿಕ ಸಮೀಕ್ಷೆಯ ವಿಶೇಷ ಅಭಿಯಾನ

ಯುವ ಮಾರ್ಗ ಸುದ್ದಿ



**ಅರಕೇರಾ,ಅ.11–**ರಾಜ್ಯ ಹಿಂದುಳಿದ ವರ್ಗಗಳ ಆಯೋಗದ ವತಿಯಿಂದ ನಡೆಯುತ್ತಿರುವ ಸಾಮಾಜಿಕ ಮತ್ತು ಶೈಕ್ಷಣಿಕ ಸಮೀಕ್ಷೆಯ ವಿಶೇಷ ಅಭಿಯಾನವನ್ನು ದಿನಾಂಕ 10.10.2025 ರಿಂದ ಬಿ.ಗಣೇಕಲ್ ಗ್ರಾಮದ ವ್ಯಾಪ್ತಿಯಲ್ಲಿ ಬರುವ ಸರ್ಕಾರಿ ಶಾಲೆಗಳಲ್ಲಿ ಹಾಗೂ ವಿವಿಧ ತಾಂಡಾ, ದೊಡ್ಡಿಗಳಲ್ಲಿ ಆಯೋಜನೆ ಮಾಡಲಾಯಿತು.

ಬಿ.ಗಣೇಕಲ್ ವಲಯದಲ್ಲಿ 10 ಜನ ಗಣತಿದಾರರು ಇದ್ದು, ಸರಕಾರಿ ಮಾದರಿ ಹಿರಿಯ ಪ್ರಾಥಮಿಕ ಶಾಲೆಯ ಮುಖ್ಯಗುರುಗಳಾದ ಬಸವರಾಜ ಸ್ವಾಮಿ ಅವರನ್ನು ಮೇಲ್ವಿಚಾರಕರಾಗಿ ಕಾರ್ಯ ನಿರ್ವಹಿಸುತ್ತಿದ್ದಾರೆ. ಶುಕ್ರವಾರ 40 ಕುಟುಂಬಗಳು ಮತ್ತು ಶನಿವಾರ 35 ಕುಟುಂಬಗಳು ಒಟ್ಟು 75 ಕುಟುಂಬಗಳು ವಿಶೇಷ ಅಭಿಯಾನದಲ್ಲಿ ಸಮೀಕ್ಷೆಯನ್ನು ಮಾಡಲಾಯಿತು ಎಂದು ವಲಯದ ಸಮೂಹ ಸಂಪನ್ಮೂಲ ವ್ಯಕ್ತಿಗಳಾದ ಬಸವರಾಜ ಸಾತಲ್ ಅವರು ಪ್ರಕಟಣೆಯಲ್ಲಿ ತಿಳಿಸಿದ್ದಾರೆ.

# ವಿಶ್ವ ವಸತಿ ರಹಿತರ ದಿನ ಸರ್ಕಾರದ ಯೋಜನೆ ಜನರಿಗೆ ತಲುಪಬೇಕು




**ಹೊಸಪೇಟೆ, ಅ.11–** ಸರ್ಕಾರದ ಮಹತ್ವಾಕಾಂಕ್ಷಿ ಯೋಜನೆಯಾಗಿರುವ ವಸತಿ ರಹಿತರಿಗೆ ಆಶ್ರಯ ಎಲ್ಲರಿಗೂ ತಲುಪುವಂತಾಗಬೇಕು ಎಂದು ಜನಶಕ್ತಿ ಸ್ವಯಂ ಸೇವಾ ಸಂಸ್ಥೆಯ ಯೋಜನಾ ಸಂಯೋಜಕ ಅನಂತ ಜೋಶಿ ಹೇಳಿದರು.

ಹೊಸಪೇಟೆಯ ನಗರಸಭೆಯ ಸಭಾಂಗಣದಲ್ಲಿ ಜಿಲ್ಲಾಡಳಿತ, ನಗರಾಭಿವೃದ್ಧಿಕೋಶ, ಕೌಶಲ್ಯಾಭಿವೃದ್ಧಿ ಹಾಗೂ ಜೀವನೋಪಾಯ ಇಲಾಖೆ ಜನಶಕ್ತಿ ಸ್ವಯಂ ಸೇವಾ ಸಂಸ್ಥೆಯ ಸಹಯೋಗದಲ್ಲಿ ಹಮ್ಮಿಕೊಂಡಿದ್ದ ವಿಶ್ವ ವಸತಿ ರಹಿತರ ದಿನ ಕಾರ್ಯಕ್ರಮದಲ್ಲಿ ಮಾತನಾಡಿದ ಅವರು ಸರ್ಕಾರದ ನಿರ್ದೇಶನದಂತೆ ಹೊಸಪೇಟೆ ನಗರಸಭೆ ತನ್ನ ಜನಸಂಖ್ಯೆಗೆ ಅನುಗುಣವಾಗಿ ಎರಡು ವಸತಿ ರಹಿತರ ಕೇಂದ್ರಗಳನ್ನು ಸುಮಾರು 80 ಜನ ಆಶ್ರಯ ಪಡೆಯಲು ಬೇಕಾದ ಎಲ್ಲಾ ಮೂಲಸೌಕರ್ಯಗಳನ್ನು ಒದಗಿಸಿದೆ ಆದರೆ ಅವುಗಳು ಪರಿಣಾಮಕಾರಿಯಾಗಿ ಕಾರ್ಯನಿರ್ವಹಿಸಲು ವಿವಿಧ ಇಲಾಖೆಗಳು ಸಹಭಾಗೀತ್ವ ಅವಶ್ಯವಾಗಿದೆ ಜನರು ಕೇವಲ ಸ್ವಯಂ ಸೇವಾ ಸಂಸ್ಥೆಗಳು ಪ್ರಚಾರಕ್ಕೆ ಹೋದಾಗ ಅನುಮಾನದಿಂದ ನೋಡುವ ಸಾಧ್ಯತೆಗಳಿವೆ ಪೊಲೀಸ ಇಲಾಖೆ ಇಂತಹ ಕೇಂದ್ರಗಳು ಪರಿಣಾಮ ಕಾರಿಯಾಗಿ ಕಾರ್ಯನಿರ್ವಹಿಸಲು ಸಹಕಾರ ನೀಡಬೇಕು ಇತ್ತೀಜೆಗೆ ಈ ಬಗ್ಗೆ ಜಾಗೃತಿಯಿಂದಾಗಿ ಜನ ಬರುವಂತಾಗುತ್ತಿದೆ ಎಂದರು.

ನಗರಸಭೆಯ ಸಮುದಾಯ ಸಂಘಟನಾಧಿಕಾರಿ ರವಿಕುಮಾರ ಮಾತನಾಡಿ ಹೊಸಪೇಟೆ ನಗರಸಭೆಯ ಎರಡು ಕೇಂದ್ರಗಳಲ್ಲಿ 80 ಜನ ತಂಗಲು ಎಲ್ಲಾ ವ್ಯವಸ್ಥೆಯನ್ನು ಮಾಡಿದೆ ಇದು ಸಂಪೂರ್ಣ ಉಚಿತವಾಗಿದ್ದು ಬೆಡ್ಡು, ಕಾಟು, ಹೊದಿಕೆ ಯುಪಿಎಸ್ ಸೌಕರ್ಯವನ್ನು ಹೊಂದಿದ್ದು ಹೆಚ್ಚಿನ ಪ್ರಚಾರಮಾಡಿ ಜನ ಬಳಕೆ ಮಾಡುವಂತಾಗಬೇಕು, ಯಾರಾದರೂ ವಸತಿ ರಹಿತವಾಗಿ ರಸ್ತೆ, ಬಸ್ ನಿಲ್ದಾಣಗಳಲ್ಲಿ ಎಲ್ಲಂದರಲ್ಲಿ ಮಲಗಿದ್ದು ಕಂಡುಬಂದಲ್ಲಿ ನಗರಸಭೆಗಾಗಲಿ ಅಥವಾ ಸ್ವಯಂ ಸೇವಾ ಸಂಸ್ಥೆಗೆ ಮಾಹಿತಿ ನೀಡಿ ವಸತಿ ದೊರೆಯುವಂತೆ ಮಾಡಬೇಕು ಇದಕ್ಕೆ ಎಲ್ಲಾ ಇಲಾಖೆಗಳ ಅಧಿಕಾರಿಗಳ ಸಹಕಾರ ಬೇಕು ಎಂದರು.

ಕಾರ್ಯಕ್ರಮದಲ್ಲಿ ಈಶಾನ್ಯ ರಾಜ್ಯ ರಸ್ತೆ ಸಾರಿಗೆ ಸಂಸ್ಥೆಯ ಸಹಾಯಕ ಸಂಚಾರ ಅಧಿಕಾರಿ ಸುಶೀಲಾ, ಆರೋಗ್ಯ ಇಲಾಖೆಯ ಧರ್ಮನಗೌಡ ಪಾಲ್ಗೊಂಡಿದ್ದರು.

## ಚಿತ್ರ ಸುದ್ದಿ



**ಲಿಂಗಸುಗೂರು,ಅ.11–**ಪಟ್ಟಣದ ಶ್ರೀಮತಿ ಬಸಮ್ಮ ಗುರುಲಿಂಗಪ್ಪ ಕಾನೂನು ಮಹಾವಿದ್ಯಾಲಯದಲ್ಲಿ ಅಂತರರಾಷ್ಟೀಯ ಹೆಣ್ಣು ಮಕ್ಕಳ ದಿನಾಚರಣೆ ಆಚರಿಸಲಾಯಿತು. ಈ ಸಂದರ್ಭದಲ್ಲಿ ಸಂಸ್ಥೆಯ ಅಧ್ಯಕ್ಷ ಸಂಜೀವಕುಮಾರ, ಪ್ರಾಚಾರ್ಯರಾದ ಅಮರೇಶ ಗೌಡೂರು, ಶಿವಣ್ಣ, ವೆಂಕಟೇಶ ಕವಿತಾಳ, ಉಪನ್ಯಾಸಕರಾದ ವೆಂಕಟೇಶ ಪೂಜಾರಿ, ಚನ್ನಬಸವ, ಚಂದ್ರಶೇಖರ, ಶಬ್ಬೀರಸಾಬ ಸೇರಿದಂತೆ ಕಾನೂನು ವಿದ್ಯಾರ್ಥಿಗಳು ಇದ್ದರು.

# ಚಂಡೀಗಢದ ಉದ್ಯಮಿ ವರಿಸಲಿರುವ ತ್ರಿಶಾ ಕೃಷ್ಣನ್

**ಮುಂಬೈ, ಅ. 11–**ತ್ರಿಶಾ ಕೃಷ್ಣನ್ ತಮ್ಮ ವೈಯಕ್ತಿಕ ಜೀವನದ ಬಗ್ಗೆ ಆಗಾಗ್ಗೆ ಸುದ್ದಿ ಮಾಡುವ ನಟಿಯರಲ್ಲಿ ಒಬ್ಬರು. ಇತ್ತೀಚೆಗೆ, ಅವರ ಮತ್ತು ನಟ ದಳಪತಿ ವಿಜಯ್ ನಡುವಿನ ಸಂಬಂಧದ ಬಗ್ಗೆ ವದಂತಿಗಳು ಹರಡುತ್ತಿದ್ದವು. ಆದರೆ ಈಗ, ಅವರು ಉದ್ಯಮಿಯನ್ನು ಮದುವೆಯಾಗಲಿದ್ದಾರೆ ಎಂಬ ಹೊಸ ಸುದ್ದಿ ಹೊರಬಿದ್ದಿದೆ.

ಚಂಡೀಗಢದ ಉದ್ಯಮಿಯೊಬ್ಬರ ಜೊತೆ ತ್ರಿಷಾ ಅವರ ಹೊಸ ಮದುವೆಗೆ ಅವರ ಪೋಷಕರು ಒಪ್ಪಿಗೆ ನೀಡಿದ್ದಾರೆ ಎಂದು ವರದಿಯಾಗಿದೆ. ಅಧಿಕೃತ ದೃಢೀಕರಣ ಇಲ್ಲದಿದ್ದರೂ, ಈ ಸುದ್ದಿ ಸಾಕಷ್ಟು ಊಹಾಪೋಹಗಳನ್ನು ಹುಟ್ಟುಹಾಕಿದೆ. ಎರಡೂ ಕುಟುಂಬಗಳು ಹಲವು ವರ್ಷಗಳಿಂದ ಪರಸ್ಪರ ಪರಿಚಿತರು ಎಂದು ಹೇಳಲಾಗುತ್ತದೆ.

ಇತ್ತೀಚೆಗೆ, ತ್ರಿಶಾ ಮದುವೆಯ ಬಗ್ಗೆ ತನ್ನ ಆಲೋಚನೆಗಳನ್ನು ಹಂಚಿಕೊಂಡಿದ್ದಾರೆ. ಸರಿಯಾದ ವ್ಯಕ್ತಿ ಸಿಕ್ಕರೆ, ನಾನು ಮದುವೆಗೆ ಮುಕ್ತ ಎಂದು ಅವರು ಸ್ಪಷ್ಟವಾಗಿ ಹೇಳಿದ್ದಾರೆ. ಆದಾಗ್ಯೂ, ಆ ಸಮಯ ಇನ್ನೂ ಬಂದಿಲ್ಲ ಎಂದು ಅವರು ಭಾವಿಸುತ್ತಾರೆ. ಆಕೆಯ ಪೋಷಕರು ಈ ವಿಷಯದ ಬಗ್ಗೆ ಮೌನವಾಗಿದ್ದಾರೆ, ವದಂತಿಗಳನ್ನು ದೃಢೀಕರಿಸುವುದಿಲ್ಲ ಅಥವಾ ನಿರಾಕರಿಸುವುದಿಲ್ಲ.

ತ್ರಿಶಾ ಕೃಷ್ಣನ್ 22 ವರ್ಷಗಳಿಂದ ದಕ್ಷಿಣ ಭಾರತದ ಚಲನಚಿತ್ರೋದ್ಯಮದಲ್ಲಿ ಸ್ಟಾರ್ ನಾಯಕಿ. 42 ನೇ ವಯಸ್ಸಿನಲ್ಲಿಯೂ ಸಹ, 22 ವರ್ಷದ ನಾಯಕಿಯರಿಗೆ ಸವಾಲು ಹಾಕುವ ಸೌಂದರ್ಯ ಮತ್ತು ಫಿಟ್ನೆಸ್ ಕಾಪಾಡಿಕೊಂಡು ಬಂದಿದ್ದಾರೆ.ಈ ಚೆನ್ನೈ ಬೆಡಗಿ ಒಮ್ಮೆ ನಿಶ್ಚಿತಾರ್ಥ ಮಾಡಿಕೊಳ್ಳುವವರೆಗೂ ಹೋಗಿದ್ದರು ಆದರೆ ಅದನ್ನು ರದ್ದುಗೊಳಿಸಿದ್ದಾರೆ. ಆದರೆ ಈಗ ಕಾಲಿವುಡ್‌ನಲ್ಲಿ ತ್ರಿಶಾ ಅವರ ವಿವಾಹದ ಸಿದ್ಧತೆಗಳು ಭರದಿಂದ ಸಾಗುತ್ತಿವೆ ಎಂಬ ಮಾತು ಕೇಳಿಬರುತ್ತಿದೆ. ಈಗ, ನಟಿ ತ್ರಿಶಾ ಈ ವಿಷಯಕ್ಕೆ ತಮ್ಮದೇ ಆದ ಶೈಲಿಯಲ್ಲಿ ತೀವ್ರವಾಗಿ ಪ್ರತಿಕ್ರಿಯಿಸಿದ್ದಾರೆ. ಕಳೆದ ಕೆಲವು ದಿನಗಳಿಂದ ಮಾಧ್ಯಮಗಳಲ್ಲಿ ಬರುತ್ತಿರುವ ಸುದ್ದಿಯನ್ನು ಅವರು ಚಂಡೀಗಢದ ಉದ್ಯಮಿಯನ್ನು ಮದುವೆಯಾಗಲಿದ್ದಾರೆ ಎನ್ನಲಾಗಿದೆ.

# ಕಟ್ಟಡದ 13ನೇ ಮಹಡಿಯಿಂದ ಬಿದ್ದು ಇಬ್ಬರು ಕಾರ್ಮಿಕರ ಸಾವು



**ಬೆಂಗಳೂರು, ಅ.11–** ನಿರ್ಮಾಣ ಹಂತದ ವಸತಿ ಸಮುಚ್ಚಯದಲ್ಲಿ ಕೆಲಸ ಮಾಡುತ್ತಿದ್ದ ಇಬ್ಬರು 13ನೇ ಮಹಡಿಯಿಂದ ಕೆಳಗೆ ಬಿದ್ದು, ಮೃತಪಟ್ಟಿರುವ ದುರ್ಘಟನೆ ಬೆಳ್ಳಂದೂರು ಪೊಲೀಸ್ ಠಾಣಾ ವ್ಯಾಪ್ತಿಯ ರಾಮ್‌ದೇವ್ ಮೆಡಿಕಲ್ಸ್ ಬಳಿ ನಡೆದಿದೆ. ಪಶ್ಚಿಮ ಬಂಗಾಳದ ಸೋನ್‌ಪುರ್‌ನ ಅಮಿರ್ ಹುಸೇನ್(33), ಮುಮ್ತಾಜ್ ಅಲಿ ಮೋಲಾ(28) ಮೃತ ದುರ್ದೈವಿಗಳು.

ಡಿಎನ್‌ಆರ್ ಹರಿಸ್ತಾ ಡೆವಲಪರ್‌ಸ ವತಿಯಿಂದ ಇಲ್ಲಿ ವಸತಿ ಸಮುಚ್ಚಯವನ್ನು ನಿರ್ಮಿಸಲಾಗುತ್ತಿತ್ತು. ಇದನ್ನು ಇಂಪಿರಿಯಲ್ ಬಿಲ್ಡ್ ಟೆಕ್ ಪ್ರವೇಟ್ ಲಿಮಿಟೆಡ್ ಸಂಸ್ಥೆ ಕಾಮಗಾರಿಯ ಜವಾಬ್ದಾರಿ ವಹಿಸಿಕೊಂಡಿತ್ತು.

13ನೇ ಅಂತಸ್ತಿನಲ್ಲಿ ಸುಮಾರು 10 ಮಂದಿ ಕಾರ್ಮಿಕರು ಬಾಲ್ಕಾನಿ ನಿರ್ಮಾಣ ಕಾಮಗಾರಿಯನ್ನು ಮಾಡುತ್ತಿದ್ದರು. ಈ ವೇಳೆ ಏಕಾಏಕಿ ಅಳವಡಿಸಿದ್ದ ಸೆಂಟ್ರಿಂಗ್ ಕುಸಿದು ಮೇಲಿನಿಂದ ಇಬ್ಬರು ಕೆಳಗೆ ಬಿದಿದ್ದಾರೆ. ತೀವ್ರವಾಗಿ ಗಾಯಗೊಂಡ ಅವರು ಆಸ್ಪತ್ರೆಗೆ ಕರೆದೊಯ್ಯುವಷ್ಟರಲ್ಲಿ ಕೊನೆಯುಸಿರೆಳೆದಿದ್ದಾರೆ.

ಬೆಳ್ಳಂದೂರು ಠಾಣೆ ಪೊಲೀಸರು ಘಟನೆಗೆ ಕುರಿತಂತೆ ನಿರ್ಲಕ್ಷ್ಯ ಸೇರಿದಂತೆ ಹಲವು ಕಾಯ್ದೆಯಡಿ ಪ್ರಕರಣ ದಾಖಲಿಸಿ ಕಟ್ಟಡ ನಿರ್ಮಾಣ ಕಾಮಗಾರಿ ಉಸ್ತುವಾರಿ ವತಿಯಿಂದ ಇಂಪಿರಿಯಲ್ ಬಿಲ್ಡ್ ಟೆಕ್‌ನ ಸೈಟ್ ಎಂಜಿನಿಯರ್ ಸೇರಿದಂತೆ ಆರು ಮಂದಿಯನ್ನು ಪೊಲೀಸರು ವಶಕ್ಕೆ ಪಡೆದು ವಿಚಾರಣೆ ನಡೆಸಿದ್ದಾರೆ.

Owned, Printed and published by ANILKUMAR H from Plot No. # 3-5-415/-A MANVI Pooja Rice Mill, Near Kataraki Road, Manvi Tq. Manvi, Dist, Raichur-584123, Printed at MAA FRIENDS PRINTING PRESS, Plot No. # 3-5-415/-A Pooja Rice Mill Near Kataraki Road, Manvi Tq. Manvi, Dist: Raichur-584123, State: Karnataka Editor: ANILKUMAR H